# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 212 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 09–03–2024 ಶನಿವಾರ | ಪುಟ: 4 | ಬೆಲೆ : ರೂ.2–00
Volume - 01 Issue - 212 | Title- Code: KARKAN 28269 | Chitradurga | Date: 09-03-2024 Saturday | Page: 4 | Price: Rs. 2-00



ಒಳಪುಟದ ಸುದ್ದಿಗಳು

ನೀರಿನ ಅಭಾವ ತಪ್ಪಿಸಲು ಹ್ಯಾಂಡ್ ಪಂಪು ದುರಸ್ತಿಗೊಳಿಸಲು ಮನವಿ 2

ಚುನಾವಣೆ ಸಿದ್ಧತಾ ಕಾರ್ಯಗಳ ಬಗ್ಗೆ ನಿಗಾ ಇರಿಸಲು ತಹಸಿಲ್ದಾರರಿಗೆ ಡಿಸಿ ಸೂಚನೆ 3

ಮಾನವನ ಮನಸ್ಸಿನ ಕತ್ತಲೆ ಕಳೆಯಲು ಗುರುವಿನ ಅಗತ್ಯ: ಸ್ವಾಮೀಜಿ 4



ಸುದ್ದಿ, ಜಾಹಿರಾತಿಗೆ 9686622252


## ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

# ಲಂಕೇಶ್ ಮೇಷ್ಟ್ರು ಬರಹಗಳು ಸರ್ಕಾರಕ್ಕೆ ಎಚ್ಚರಿಸುತ್ತಿದ್ದವು: ಜಡೆಕುಂಟೆ ಮಂಜುನಾಥ್

» ನಮ್ಮ ಜನ ಸಮಾಚಾರ

ಚಿತ್ರದುರ್ಗ: ಲಂಕೇಶ್ ಅವರು ತಮ್ಮ ಬರವಣಿಗೆಯ ಮೂಲಕ ಒಂದು ತಲೆಮಾರಿನ ವೈಚಾರಿಕವಾಗಿ ಎಚ್ಚರಿಸಿದವರು, ಸಾಹಿತ್ಯಕವಾಗಿ ಬರಹಗಾರನ್ನು ಬೆಳೆಸಿದವರು. ಪತ್ರಕರ್ತರಾಗಿ ನೇರ, ನಿಷ್ಠೂರ ನಡೆಯಿಂದ ಸರಕಾರಗಳಿಗೂ ಎಚ್ಚರಿಕೆಯಾಗಿದ್ದರು' ಎಂದು ಕತೆಗಾರ, ಪತ್ರಕರ್ತ ಜಡೆಕುಂಟೆ ಮಂಜುನಾಥ್ ಹೇಳಿದರು.

ನಗರದ ಪತ್ರಿಕಾ 'ವನದಲ್ಲಿ ಶುಕ್ರವಾರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದಿಂದ ಆಯೋಜಿಸಿದ್ದ'ಮತ್ತೆ ಮತ್ತೆ ಲಂಕೇಶ್ ಮೇಷ್ಟು' ಕಾರ್ಯಕ್ರಮದಲ್ಲಿ ಮಾತನಾಡಿದರು.

ಲಂಕೇಶ್ ಮೇಷ್ಟು ಬರವಣಿಗೆಯಿಂದ ಸಾವಿರಾರು ಯುವ ಸಮೂಹ ತನ್ನ ಜೀವನ ಹೇಗೆ ನಡೆಸಬೇಕು ಎಂಬುದನ್ನು ಹರಿತು ನಡೆಯುವಂತಾಯಿತು. 'ತಮ್ಮ ಹರಿತವಾದ ವಿಚಾರ, ವಿಮರ್ಶೆ, ಸೃಜನಶೀಲ ಬರಹಗಳಿಂದ ಟ್ಯಾಬ್ಲಾಯ್ಡ್ ಪತ್ರಿಕೆಗೆ ಹೊಸ ಸ್ವರೂಪ, ಆಯಾಮ ನೀಡುವ ಮೂಲಕ ರಾಜ್ಯದಲ್ಲಿ ಸಂಚಲನ ಮೂಡಿಸಿದರು. ಪ್ರಸ್ತುತ ಕಾಲಘಟ್ಟದ ಪತ್ರಕರ್ತರು,ಬರಹಗಾರರು ಲಂಕೇಶ್‌ರನ್ನು ಓದಿಕೊಳ್ಳ ಬೇಕು. ಹಿಂದೊಮ್ಮೆ ಲಂಕೇಶರ ವಿಚಾರ ವೇದಿಕೆ ರೂಪಿಸಿದ್ದೆವು. ಅದಕ್ಕೆ ಡಾ.ಬಿ.ಎಂ.ಶರ'ಂದ್ರಯ್ಯ ಒತ್ತಾಸೆಯಾ ಗಿದ್ದರು. ತಾತ್ವಿಕ ಭಿನ್ನಾಭಿಪ್ರಾಯ ವ್ಯಕ್ತವಾದ ಹಿನ್ನೆಲೆಯಲ್ಲಿ ಅದು ಸ್ಥಗಿತಗೊಂಡಿದ್ದು ಬೇಸರದ ಸಂಗತಿ ಎಂದು ಬೇಸರ ಹೊರಹಾಕಿದರು.

ಉಪನ್ಯಾಸಕ ಡಾ.ಗುರುನಾಥ್ ಮಾತನಾಡಿ ಲಂಕೇಶ್ ಅವರ ಪತ್ರಿಕೆಯನ್ನು ನಾನು ಓದುತ್ತ ಬೆಳೆಯ ತೊಡಗಿದೆ. ಕಷ್ಟದ ಸಮಯದಲ್ಲಿ ಸ್ನೇಹಿತರ ಖರೀದಿ ಮಾಡಿದ್ದಂತಹ ಪತ್ರಿಕೆ ಓದುವ ಮೂಲಕ ಲಂಕೇಶ್ ಅವರ ಬರಹಗಳು ನಮ್ಮ ಬದಲಾವಣೆಗೆ ಸಾಕ್ಷಿಯಾದವು ಎಂದರು. 'ಲಂಕೇಶ್‌ರವರು ಇಡೀ ಕರ್ನಾಟಕದ ಮೇಷ್ಟು ಆಗಿದ್ದರು. ಹುಟ್ಟು ಹಬ್ಬದ ನೆಪದಲ್ಲಿ ಸ್ಮರಿಸುತ್ತಿರುವುದು ನಮ್ಮೆಲ್ಲರಿಗೂ ಸಿಕ್ಕಿರುವ ಒಂದು ಸಂತಸದ ಕ್ಷಣವಾಗಿದೆ. ಲಂಕೇಶರು ತಮ್ಮ ಸಾಹಿತ್ಯ ಕೃಷಿ, ಪತ್ರಿಕಾ ಕೃಷಿಯ ಮೂಲಕ ತಮಗೇ ಅರಿವಿಲ್ಲದೇ ನಾಡಿನಾದ್ಯಂತ ಆ ತಲೆಮಾರಿನ ಬರಹಗಾರರನ್ನು ಹುಟ್ಟು ಹಾಕಿದರು.ಧರ್ಮ, ರಾಜಕಾರಣ, ಜಾತಿ ಕುರಿತ ಅವರ ಗ್ರಹಿಕೆಗಳು ಅಪರೂಪದ ಒಳನೋಟ ಹೊಂದಿದ್ದವು.' ಎಂದರು.

ಹಿರಿಯ ಪತ್ರಕರ್ತ ಚಿಕ್ಕಪ್ಪನಹಳ್ಳಿ ಷಣ್ಮುಖ ಮಾತನಾಡಿ' ಲಂಕೇಶ್ ರವರು ನನ್ನ ಇಡೀ ಬದುಕಿನ ಆಲೋಚನಾ ಕ್ರಮವನ್ನೇ ಬದಲಾಯಿಸಿ ದವರು. ಅವರು ಕಟ್ಟಿದ ಪ್ರಗತಿ ರಂಗದ ಜತೆ ನನ್ನ ಒಡನಾಟ ಇತ್ತು. ರಾಜಕೀಯ ಪಕ್ಷಗಳು ಪ್ರಗತಿ ರಂಗದ ಪ್ರಣಾಳಿಕೆಯನ್ನು ರಾಜ್ಯ ಸರ್ಕಾರಗಳು ತಮ್ಮ ಪ್ರಣಾಳಿಕೆಯಲ್ಲಿ ಅಳವಡಿಸಿಕೊಂಡಿದ್ದರೆ ಇಡೀ ಕರ್ನಾಟಕದ ಚಿತ್ರಣವೇ ಇಂದು ಬದಲಾಗುತ್ತಿತ್ತು. ತಮ್ಮ ಆಲೋಚನೆಗಳಿಂದ ಗಾಂಧಿ ಕಡೆ ವಾಲಿದವು.ಆದರೆ ಲಂಕೇಶರು ಅಂಬೇಡ್ಕರ್ ಚಿಂತನೆಗಳಿಗೇಕೆ ಮಹತ್ವ ಕೊಡಲಿಲ್ಲ ಎನ್ನುವ ಕೊರಗು ಈಗಲೂ ಸಹ ನನಗಿದೆ ಎಂದರು.

ಪ್ರಗತಿಪರ ಚಿಂತಕ ಜೆ.ಯಾದವರೆಡ್ಡಿ ಮಾತನಾಡಿ' ಲಂಕೇಶ್ ಪತ್ರಿಕೆ ಹೇಗಿತ್ತು ಎಂದರೆ ಓದುಗರು ಜಾತಕ ಪಕ್ಷಿಗಳಂತೆ ಕಾದು ಓದುತ್ತಿದ್ದರು. ಜಾಹಿರಾತು ಇಲ್ಲದೇ ಪತ್ರಿಕೆ ನಡೆಸಿದ ರಾಜ್ಯದ ಏಕೈಕ ಪತ್ರಿಕೆಯಾಗಿರು ಹೆಗ್ಗಳಿಕೆ ಅವರದು. ಕೊನೆಯವರೆಗೂ ಬರವಣಿಗೆ ನಿಲ್ಲಿಸಲಿಲ್ಲ. ಪತ್ರಕರ್ತರು ಹೆಚ್ಚು ಓದಬೇಕು ಅನ್ನೋದನ್ನು ಹೇಳಿದ್ದೆ ಲಂಕೇಶ್ ಮೇಷ್ಟ್ರು. ನಾನು ಸಹ ಲಂಕೇಶ್ ಪತ್ರಿಕೆಯ ಏಜೆಂಟ್ ಆಗಿ ಕೆಲಸ ಮಾಡಿದ್ದೇನೆ. ಜನರು ಯಾವ ರೀತಿ ಲಂಕೇಶ್ ಪತ್ರಿಕೆಯ ಬಗ್ಗೆ ಅಭಿಮಾನ ಹೊಂದಿದ್ದರು ಎಂಬುದರನ್ನು ಹತ್ತಿರದಿಂದ ನೋಡಿದ್ದೇನೆ. ಲಂಕೇಶ್ ಅವರು ಎಲ್ಲ ಸಿದ್ಧಾಂತ ಮೀರಿದ, ಅಪ್ಪಟ ಜೀವನ ಪ್ರೀತಿಯನ್ನು ಹೊಂದಿದ್ದರು' ಎಂದು ಹೇಳಿದರು.ನಿವೃತ್ತ ಪ್ರಾಚಾರ್ಯ ಡಾ.ಸಂಗೇನಹಳ್ಳಿ ಅಶೋಕ್ ಕುಮಾರ್ ಮಾತನಾಡಿ'ಒಂದು ವಿಶ್ವ ವಿದ್ಯಾಲಯ ವಾಗಿದ್ದವರು. ಅನೇಕರನ್ನು ಪ್ರ'ವಿಸಿದವರು. ಅವರ ಬಹುತೇಕ ಕೃತಿಗಳನ್ನು ಬೋಸಿದ ಹೆಗ್ಗಳಿಕೆ ನನಗಿದೆ. ಇದು ನನ್ನ ಸೌ'ಗ್ಯ ಎಂದು 'ವಿಸಿದ್ದೇನೆ. ತಮ್ಮ ತ್ರಿಕಾ ಬರಹಗಳಿಂದ ಬಹಳಷ್ಟು ಜನರನ್ನು ಪ್ರ'ವಿಸಿದ್ದಾರೆ. ಅವರ ಚಿಂತನೆ ಗಳ ಹೊಂದಿರುವ ಒಂದು ಪರಂಪರೆ ಬಿಟ್ಟು ಹೋಗಿದ್ದಾರೆ' ಎಂದರು.ಕಾರ್ಯಕ್ರಮದ ಅ'ಕ್ಷತೆ ವಹಿಸಿದ್ದ ಸಂಘದ ಜಿಲ್ಲಾ'ಕ್ಷ ದಿನೇಶ್ ಗೌಡಗೆರೆ ಮಾತನಾಡಿ'ಲಂಕೇಶರ ಹುಟ್ಟು ಹಬ್ಬದ ದಿನ ಅವರ ಚಿಂತನೆಗಳನ್ನು ನೆನಪು ಮಾಡಿಕೊಳ್ಳಲು ಈ ಕಾರ್ಯಕ್ರಮ ಸಹಕಾರಿ ಯಾಗಿದೆ. ಇನ್ಮುಂದೆ ಪ್ರತಿ ತಿಂಗಳು ಉಪನ್ಯಾಸ ಕಾರ್ಯಕ್ರಮಗಳನ್ನು ಆ ಂ ು ೋ ಜಿ ಸ ಲಾ ಗ ು ವ ು ದ ು ' ಎಂದರು.ಲಂಕೇಶ್ ಮೇಷ್ಟು ಅವರ ಬರಹಗಳು ನಮ್ಮೆಲ್ಲರಿಗೂ ಸಹ ಒಂದು ಪ್ರೇರಣೆಯಾಗಿದೆ. ಲಂಕೇಶ್ ಮೇಷ್ಟು ಸಾವಿರಾರು ಯುವಕರಿಗೆ ಬರಹಗಳ ಮೂಲಕ ಮುನ್ನೆಲೆಗೆ ತರುವ ಕೆಲಸ ಮಾಡಿದರು ಎಂದು ಸ್ಮರಿಸಿದರು.

ಸ'ಯಲ್ಲಿ ಪತ್ರಕರ್ತರಾದ ಕನ್ನಡ ಸಂಪಿಗೆ ತಿಪ್ಪೇಸ್ವಾಮಿ, ಎಂ.ಎನ್. ಅಹೋಬಳಪತಿ, ಗೌನಹಳ್ಳಿ ಗೋವಿಂದಪ್ಪ, ಮಲ್ಲಾಪುರ ಹರೀಶ್ ಇದ್ದರು.




ನಗರದ ಪತ್ರಿಕಾ 'ವನದಲ್ಲಿ ಶುಕ್ರವಾರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂ ಘದಿಂದ ಆಯೋಜಿಸಿದ್ದ'ಮತ್ತೆ ಮತ್ತೆ ಲಂಕೇಶ್ ಮೇಷ್ಟು' ಕಾರ್ಯಕ್ರಮದಲ್ಲಿ ಡಾ.ಸಂಗೇನಹಳ್ಳಿ ಅಶೋಕ್ ಕುಮಾರ್ ಮಾತನಾಡಿದರು. ಜೆ.ಯಾದವರೆಡ್ಡಿ, ಜಡೇಕುಂಟೆ ಮಂಜುನಾಥ್, ಡಾ.ಗುರುನಾಥ್ ಇದ್ದರು.

## ಫಾಸ್ಟ್ ನ್ಯೂಸ್

### ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ ನಾಮನಿರ್ದೇಶನಕ್ಕೆ ಆಹ್ವಾನ

» ದಾವಣಗೆರೆ

ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಗೆ ಸದಸ್ಯರನ್ನಾಗಿ ನಾಮನಿರ್ದೇಶನ ಮಾಡಲು ಬಾಲ ಹಾಗೂ ಕಿಶೋರ ಕಾರ್ಮಿಕ ಪದ್ಧತಿ ನಿರ್ಮೂಲನೆ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವ. ಇಬ್ಬರು ಸಮಾಜ ಸೇವಕರು, ತಲಾ ಒಬ್ಬರು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಇಬ್ಬರು ಮಹಿಳಾ ಪ್ರತಿನಿಧಿಗಳು ಒಬ್ಬರು ಅಲ್ಪಸಂಖ್ಯಾತರ ಪ್ರತಿನಿಧಿಗಳನ್ನು ಗುರುತಿಸಿ ನಾಮನಿರ್ದೇಶನ ಮಾಡಲು ಪ್ರಸ್ತಾವನೆಗಳನ್ನು ಆಹ್ವಾನಿಸಲಾಗಿದೆ. ಪ್ರಸ್ತಾವನೆಯನ್ನು ಮಾ. 19 ಕ್ಕೆ ಸಂಜೆ 5.30 ಗಂಟೆಯೊಳಗೆ ಸಹಾಯಕ ಕಾರ್ಮಿಕ ಆಯುಕ್ತರು ಹಾಗೂ ಸದಸ್ಯ ಕಾರ್ಯದರ್ಶಿಗಳು, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ, ಬಿಎಸ್‌ಎನ್‌ಎಲ್ ಕಟ್ಟಡ, ದೇವರಾಜ ಅರಸ್ ಬಡಾವಣೆ, ಹರಿಹರ ರಸ್ತೆ, ದಾವಣಗೆರೆ ಇಲ್ಲಿಗೆ ಸಲ್ಲಿಸಬೇಕೆಂದು ಸಹಾಯಕ ಕಾರ್ಮಿಕ ಆಯುಕ್ತರಾದ ಇಬ್ರಾಹಿಂ ತಿಳಿಸಿದ್ದಾರೆ.

### ಅಹವಾಲು ಸ್ವೀಕಾರ

» ದಾವಣಗೆರೆ

ದಾವಣಗೆರೆ ಲೋಕಾಯುಕ್ತ ವಿಭಾಗದ ಪೊಲೀಸ್ ಅಧೀಕ್ಷಕರಾದ ಎಂ.ಎಸ್ ಕೌಲಾಪೂರೆ ಅವರು ದಾವಣಗೆರೆ ನಗರದ ಪ್ರವಾಸಿ ಮಂದಿರದಲ್ಲಿ ಮಾ.13 ರಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 1.30 ವರೆಗೆ ಸಾರ್ವಜನಿಕರ ಅಹವಾಲು ಸ್ವೀಕಾರಿಸುವರು. ಸಾರ್ವಜನಿಕರು ಸರ್ಕಾರದ ವಿವಿಧ ಇಲಾಖೆಗಳಿಗೆ ಸಲ್ಲಿಸಿದ ಅರ್ಜಿಗಳನ್ನು ಇತ್ಯರ್ಥ ಮಾಡದೇ ಬಗ್ಗೆ ಬಾಕಿ ಇಟ್ಟಿರುವ ಬಗ್ಗೆ ತಮ್ಮ ದೂರು ಸಲ್ಲಿಸಬಹುದು. ನ್ಯಾಯಾಲಯದಲ್ಲಿ ವಿಚಾರಣೆ ಬಾಕಿ ಇದ್ದರೆ, ಅಂತಹ ದೂರುಗಳನ್ನು ಸ್ವೀಕರಿಸಲಾಗುವುದಿಲ್ಲ.

### ಮಾ.12 ರಂದು ದಾವಣಗೆರೆ ವಿವಿ 11ನೇ ಘಟಿಕೋತ್ಸವ

» ದಾವಣಗೆರೆ

ದಾವಣಗೆರೆ ವಿಶ್ವವಿದ್ಯಾನಿಲಯದ 11ನೇ ಘಟಿಕೋತ್ಸವವು ಮಾರ್ಚ್ 12 ರಂದು ಬೆಳಿಗ್ಗೆ 11 ಗಂಟೆಗೆ ತೋಳಹುಣಸೆಯಲ್ಲಿನ ಜ್ಞಾನಸೌಧ ಶಿವಗಂಗೋತ್ರಿ ಆವರಣದಲ್ಲಿ ನಡೆಯಲಿದೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ರಾಜ್ಯಪಾಲರು ಹಾಗೂ ದಾವಣಗೆರೆ ವಿಶ್ವವಿದ್ಯಾನಿಲಯದ ಕುಲಾಧಿಪತಿಗಳಾದ ಥಾವರ್‌ಚಂದ್ ಗೆಹ್ಲೋಟ್ ಅವರುವಹಿಸುವರು.ಉನ್ನತಶಿಕ್ಷಣಸಚಿವರುಹಾಗೂ ವಿಶ್ವವಿದ್ಯಾನಿಲಯದ ಸಮಕುಲಾಧಿಪತಿಗಳಾದ ಡಾ.ಎಂ.ಸಿ.ಸುಧಾಕರ್ ಉಪಸ್ಥಿತರಿರುವರು. ಇಸ್ರೋ ಮಾಜಿ ಅಧ್ಯಕ್ಷರಾದ ಎ.ಎಸ್ ಕಿರಣ್ ಕುಮಾರ್ ಮುಖ್ಯ ಅತಿಥಿಗಳಾಗಿ ಘಟಿಕೋತ್ಸವ ಭಾಷಣ ಮಾಡಲಿದ್ದಾರೆ. ಕಾರ್ಯಕ್ರಮದಲ್ಲಿ ದಾವಣಗೆರೆ ವಿ.ವಿ. ಕುಲಪತಿಗಳಾದ ಪ್ರೊ.ಬಿ.ಡಿ.ಕುಂಬಾರ, ಕುಲಸಚಿವರಾದ ಪ್ರೊ. ರಮೇಶ.ಸಿ.ಕೆ, ಕುಲಸಚಿವರು(ಪ್ರಭಾರ) ಪ್ರೊ. ವೆಂಕಟರಾವ್.ಎಂ.ಪಲಾಟೆ ಭಾಗವಹಿಸುವರು.

### ಮಾರ್ಚ್ ಮಾಹೆಯ ಪಡಿತರ ಧಾನ್ಯ ಹಂಚಿಕೆ


» ದಾವಣಗೆರೆ

ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯಡಿ ಜಿಲ್ಲೆಯಲ್ಲಿನ ಪಡಿತರ ಚೀಟಿದಾರರಿಗೆ ಮಾರ್ಚ್ ಮಾಹೆಗೆ ಅನ್ವಯವಾಗುವಂತೆ ಪಡಿತರ ಧಾನ್ಯ ಹಂಚಿಕೆ ಮಾಡಲಾಗಿದೆ. ಅಂತ್ಯೋದಯ ಪಡಿತರ ಚೀಟಿದಾರರಿಗೆ ಪ್ರತಿ ಕಾರ್ಡ್‌ಗೆ 35 ಕೆ.ಜಿ ಅಕ್ಕಿ, ಆದ್ಯತಾ ಹಾಗೂ ಬಿ.ಪಿ.ಎಲ್ ಪಡಿತರ ಚೀಟಿದಾರರಿಗೆ 5 ಕೆ.ಜಿ ಅಕ್ಕಿ ಉಚಿತವಾಗಿ ವಿತರಿಸಲಾಗುತ್ತದೆ.

ಬೆಂಗಳೂರು ಮುಖ್ಯ ಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ಬೃಹತ್ ಬಂಡವಾಳ ಹೂಡಿಕೆಗಳ ಪ್ರಸ್ತಾವನೆಗಳಿಗೆ ವಿಶೇಷ ರಿಯಾಯಿತಿ ಹಾಗೂ ಉತ್ತೇಜನ ಗಳನ್ನು ಮಂಜೂರು ಮಾಡುವ ಸಂಬಂಧ ಏರ್ಪಡಿಸಿದ್ದ ಸಚಿವ ಸಂಪುಟದ ಉಪ ಸಮಿತಿ ಸಭೆ ಜರುಗಿತು. ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್, ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ ಖರ್ಗೆ, ಮುಖ್ಯ ಮಂತ್ರಿಗಳ ಅಪರ ಮುಖ್ಯ ಕಾರ್ಯದರ್ಶಿ ಎಲ್.ಕೆ.ಅತೀಕ್, ಅಭಿವೃದ್ಧಿ ಆಯುಕ್ತ ರು ಹಾಗೂ ಅಪರ ಮುಖ್ಯ ಕಾರ್ಯದರ್ಶಿ ಡಾ: ಶಾಲಿನಿ ರಜನೀಶ್, ಕೈಗಾರಿಕಾ ಇಲಾಖೆ ಕಾರ್ಯದರ್ಶಿ ಸೆಲ್ವಕುಮಾರ್, ಆಯುಕ್ತರಾದ ಗುಂಜನ್ ಕೃಷ್ಣಾ, ಉಪಸ್ಥಿತರಿದ್ದರು.



## ಬೆಂಗಳೂರಿನ ಕೃಷಿವಿಶ್ವವಿದ್ಯಾಲಯ ಡಾಕ್ಟರೇಟ್ ಪದವಿ ಪಡೆದ ಟಿ.ಪಲ್ಲವಿ



ಚಳ್ಳಕೆರೆ: ಚಳ್ಳಕೆರೆ ವಾಲ್ಮೀಕಿ ನಗರ ನಿವಾಸಿ ಟಿ.ಪಲ್ಲವಿ ಎಂಎಸ್‌ಸಿ ಆಗ್ರಿ ಇವರು ಬೆಂಗಳೂರಿನ ಜಿಕೆವಿಕೆ ಕೃಷಿ ವಿಶ್ವವಿದ್ಯಾಲಯದ ಪ್ರೊ.ಡಾ.ಎನ್.ಬಿ.ಪ್ರಕಾಶ್ ಮಾರ್ಗದರ್ಶನದಲ್ಲಿ ಮಣ್ಣು ವಿಜ್ಞಾನ ಮತ್ತು ಕೃಷಿ ರಾಸಾಯನಶಾಸ್ತ್ರ ಮಂಡಿಸಿದ ಪ್ರಬಂಧಕ್ಕೆ ಪಿಎಚ್‌ಡಿ ಪದವಿ ಲಭಿಸಿದೆ. ಇತ್ತೀಚೆಗೆ ನಡೆದ 58ನೇ ಘಟಿಕೋತ್ಸವದಲ್ಲಿ ವಿಶ್ವವಿದ್ಯಾಲಯದ ಕುಲಪತಿ ಹಾಗೂ ಉಪಕುಲಪತಿಗಳು ಟಿ.ಪಲ್ಲವಿಯವರಿಗೆ ಡಾಕ್ಟರೇಟ್ ಪದವಿಯನ್ನು ಪ್ರಧಾನ ಮಾಡಿದರು. ಇಲ್ಲಿನ ತಿಮ್ಮಪ್ಪ ಮತ್ತು ಸಾವಿತ್ರಮ್ಮ ಎಂಬುವವರ ಪುತ್ರಯಾಗಿದ್ದು, ಇವರ ಸಾಧನೆಗೆ ಪ್ರಶಂಸೆ ವ್ಯಕ್ತವಾಗಿದೆ.

## ಪ್ರಮುಖ ಸುದ್ದಿ

### ಜಿಲ್ಲಾ ನೀರಾವರಿ ಅನುಷ್ಠಾನ ಹೋರಾಟ ಸಮಿತಿ ಸಲಹೆ

# ಭದ್ರಾಗೆ ಹಣಕಾಸು ತೊಂದ್ರೆಯಾದ್ರೆ ಬಾಂಡ್ ಮೂಲಕ ಸಂಗ್ರಹಿಸಿ

» ಚಿತ್ರದುರ್ಗ

ಭದ್ರಾ ಮೇಲ್ದಂಡೆ ಯೋಜನೆ ಪೂರ್ಣಗೊಳಿಸಲು ರಾಜ್ಯ ಸರ್ಕಾರ ಸಂಪನ್ಮೂಲಗಳ ಕೊರತೆ ಎದುರಿಸುತ್ತಿದ್ದರೆ ಕೃಷ್ಣ ಜಲಭಾಗ್ಯ ಮಾದರಿಯಲ್ಲಿ ಭದ್ರಾ ಮೇಲ್ದಂಡೆ ಯೋಜನೆಯಡಿ ಬಾಂಡ್ ಗಳ ಬಿಡುಗಡೆ ಮಾಡಿ ಸಾರ್ವಜನಿಕ ವಲಯದಿಂದ ಸಂಪನ್ಮೂಲ ಕ್ರೋಢೀಕರಣ ಮಾಡಿಕೊಂಡು ಯೋಜನೆ ಪೂರ್ಣಗೊಳಿಸುವಂತೆ ನೀರಾವರಿ ಅನುಷ್ಠಾನ ಹೋರಾಟ ಸಮಿತಿ ಸಲಹೆ ಮಾಡಿದೆ.

ಈ ಸಂಬಂಧ ಶುಕ್ರವಾರ ಹೇಳಿಕೆ ನೀಡಿರುವ ಸಮಿತಿ ಕಾರ್ಯಾಧ್ಯಕ್ಷ ಬಿ.ಎ.ಲಿಂಗಾರೆಡ್ಡಿ,ಬೇರೆ ಕಡೆ ಸಾಲ ಮಾಡಿದರೆ ರಾಜ್ಯ ಸರ್ಕಾರ ಬಡ್ಡಿ ಕಟ್ಟಲೇ ಬೇಕು. ಬಾಂಡ್ ಬಿಡುಗಡೆ ಮಾಡಿದರೆ ಬಯಲು ಸೀಮೆ ಜನ ಕೊಂಡು ಯೋಜನೆ ಸಾಕಾರ ಗೊಳಿಸಲು ಸಹಕರಿಸುತ್ತಾರೆ. ಬಾಂಡ್ ಕೊಳ್ಳಲು ಉದ್ಯಮಿಗಳು ಮುಂದೆ ಬರಬಹುದು. ಈ ನಿಟ್ಟಿನಲ್ಲಿ ಸರ್ಕಾರ ಚಿಂತಿಸುವಂತೆ ಮನವಿ ಮಾಡಿದ್ದಾರೆ.

ಅಬ್ಬಿನಹೊಳಲು ಭೂ ಸ್ವಾದೀನ ಪ್ರಕ್ರಿಯೆ ಆಡಳಿತ ವ್ಯವಸ್ಥೆ ಲೋಪವಾಗಿದ್ದು ಸರಿಪಡಿಸಿಕೊಳ್ಳಲಾಗಿದೆ. ಜನಪ್ರತಿನಿಧಿಗಳು ಹಾಗೂ ಜಲ ಸಂಪನ್ಮೂಲ ಇಲಾಖೆ ಅಧಿಕಾರಿಗಳುಸಮಸ್ಯೆಬಗೆಹರಿಸಿದ್ದೇವೆಂದು ಹೆಮ್ಮೆ ಪಟ್ಟುಕೊಳ್ಳದೆ ಬಾಕಿ ಉಳಿದ ಕಾಮಗಾರಿಗಳ ಕಡೆ ಗಮನ ಹರಿಸಬೇಕು. ಮೊದಲ ಹಂತದಲ್ಲಿ ತುಂಗಾ ನದಿಯಿಂದ ಭದ್ರಾ ಜಲಾಶಯಕ್ಕೆ 17.40 ಟಿಎಂಸಿ ನೀರನ್ನು ಲಿಫ್ಟ್ ಮಾಡುವ ಪ್ಯಾಕೇಜ್ 1 ರ ಕಾಮಗಾರಿ ಇಲಾಖಾ ದಾಖಲಾತಿಗಳಲ್ಲಿ ನಾಲ್ಕಾರು ವರ್ಷಗಳಿಂದ ಪ್ರಗತಿಯಲ್ಲಿದೆ ಎಂದು ನಮೂದಾಗಿದೆ. ಆದರೆ ಪ್ರಗತಿ ಪ್ರಮಾಣದಲ್ಲಿ ಯಾವುದೇ ಬಗೆಯ ಏರಿಕೆ ಕಂಡು ಬಂದಿಲ್ಲ. ಅನುದಾನದ ಅಲಭ್ಯತೆಯಿಂದಾಗಿ ಕುಂಟುತ್ತಾ ಸಾಗಿದೆ. ಪರಿಸರ ಮತ್ತು ಅರಣ್ಯ ಇಲಾಖೆಯ ಕ್ಲಿಯರೆನ್ಸ್ ಬಾಕಿ ಉಳಿದಿರುವುದರಿಂದ ಕಾಮಗಾರಿಗೆ ಚುರುಕಿನ ವೇಗ ನೀಡಲು ಸಾಧ್ಯವಾಗದೇ ಹೋಗಿರುವುದು ವಿಷಾಧಕರ ಸಂಗತಿ. ಭದ್ರಾ ಮೇಲ್ದಂಡೆಯಲ್ಲಿ ಅತಿ ಹೆಚ್ಚು ನೀರಿನ ಪಾಲು ತುಂಗೆಯಲ್ಲಿದೆ. ಆದರೆ ಅಧಿಕಾರಿಗಳು ಭದ್ರಾ ಜಲಾಶಯದಿಂದ ಅಜ್ಜಂಪುರ



ಸುರಂಗದವರೆಗೆ ನೀರನ್ನು ಲಿಫ್ಟ್ ಮಾಡುವ ಮತ್ತು ಅಜ್ಜಂಪುರದ ಸುರಂಗ ನಿರ್ಮಾಣ ಮಾಡಿದ ಕಾಮಗಾರಿ ತೋರಿಸಿ ವಿವಿ ಸಾಗರಕ್ಕೆ ನೀರು ಹರಿಸಲಾಗಿದೆ ಎಂಬ ಭರವಸೆ ಮೂಡಿಸಿದ್ದಾರೆ. ಆದರೆ ಭದ್ರಾ ಮೇಲ್ದಂಡೆ ಕಾಮಗಾರಿ ಇದೊಂದೇ ಉದ್ದೇಶ ಹೊಂದಿಲ್ಲವೆಂಬ ಸಂಗತಿ ಸರ್ಕಾರ ಅರಿಯಬೇಕು. ಚಿತ್ರದುರ್ಗ ಶಾಖಾ ಕಾಲುವೆ ನಿರ್ಮಾಣದ ಕಾಮಗಾರಿಯನ್ನು 1682 ಕೋಟಿ ರುಪಾಯಿ ವೆಚ್ಚದಲ್ಲಿ 12 ಪ್ಯಾಕೇಜ್ ಗಳಲ್ಲಿ ಕೈಗೆತ್ತಿಕೊಳ್ಳಲಾಗಿದ್ದು ಎಲ್ಲವೂ ಅರೆ ಬರೆಯಾಗಿವೆ. ತುಮಕೂರು ಶಾಖಾ ಕಾಲುವೆಯ ಐದು ಪ್ಯಾಕೇಜ್ ಕಾಮಗಾರಿಗಳ ಸರ್ವೆ ಕಾರ್ಯ ಬಾಕಿ ಇದೆ. ಜಗಳೂರು ತಾಲೂಕಿನ 13200 ಹೆಕ್ಟೇರು ಪ್ರದೇಶಕ್ಕೆ ಸೂಕ್ಷ್ಮ ನೀರಾವರಿ ಕಲ್ಪಿಸುವ ಹಾಗೂ 9 ಕೆರೆಗಳ ತುಂಬಿಸುವ 1568 ಕೋಟಿ ರುಪಾಯಿ ವೆಚ್ಚದ ಎರಡು ಪ್ಯಾಕೇಜ್ ಗಳ ಕಾಮಗಾರಿ ಇನ್ನೂ ಪೂರ್ಣ ಪ್ರಮಾಣದಲ್ಲಿ ಆರಂಭವಾಗಿಯೇ ಇಲ್ಲ. ಚಳ್ಳಕೆರೆ, ಮೊಳಕಾಲ್ಮೂರು ತಾಲೂಕುಗಳ ಪರಿಸ್ಥಿತಿ ಹೆಚ್ಚು ಕಡಿಮೆ ಹೀಗೆಯೇ ಇದೆ.

ಭದ್ರಾ ಮೇಲ್ದಂಡೆಗೆ ಒಟ್ಟು 8825 ಎಕರೆ ಭೂ ಸ್ವಾಧೀನವಾಗಬೇಕಿದ್ದು 5786 ಎಕರೆ ಮಾತ್ರ ಇದುವರೆಗೂ ಸಾಧ್ಯವಾಗಿದೆ. 3038 ಎಕರೆ ಭೂ ಸ್ವಾಧೀನವಾಗಬೇಕಿದೆ. ಭೂ ಸ್ವಾಧೀನಕ್ಕೆ ಇದುವರೆಗೂ 914 ಕೋಟಿ ರು ಬಿಡುಗಡೆಯಾಗಿದ್ದು ಇನ್ನೂ 565 ಕೋಟಿ ರು ಬೇಕಾಗಿದೆ. ಭೂ ಸ್ವಾಧೀನಕ್ಕೆ ಹಣಕಾಸು ಮುಗ್ಗಟ್ಟು ತೋರಿಸುವ ಸರ್ಕಾರ ನಿಗಧಿತ ಅವಧಿಯಲ್ಲಿ ಯೋಜನೆ ಮುಗಿಸುವ ಸಾಧ್ಯತೆಗಳು ಕ್ಷೀಣಿಸಿವೆ. ಭದ್ರಾ ಮೇಲ್ದಂಡೆಗೆ ಇದುವರೆಗೂ 9112 ಕೋಟಿ ರುಪಾಯಿ ವೆಚ್ಚ ಮಾಡಲಾಗಿದ್ದು 12351 ಕೋಟಿ ರುಪಾಯಿ ಬೇಕಾಗಿದೆ. ರಾಜ್ಯ ಸರ್ಕಾರ ಕೇಂದ್ರದ ಮೇಲೆ ಅನುದಾನ ಬಿಡುಗಡೆ ಗೂಬೆ ಕೂರಿಸುತ್ತ ತನ್ನ ಜವಾಬ್ದಾರಿ ಮರೆತಿದೆ. ಕೇಂದ್ರ ಸರ್ಕಾರ 5300 ಕೋಟಿ ಕೊಟ್ಟರೂ ಏಳು ಸಾವಿರ ಕೋಟಿ ರುಪಾಯಿ ರಾಜ್ಯ ಸರ್ಕಾರ ಒದಗಿಸಬೇಕಾಗುತ್ತದೆ.

ತುಂಗಾ ನದಿಯ ಜಲಾವೃತ ಪ್ರದೇಶದಲ್ಲಿ 11 ಟವರ್ ಗಳ ಹೆಚ್ ಟಿ ಲೈನ್ ನಿರ್ಮಾಣಕ್ಕಾಗಿ ಅರಣ್ಯ ಇಲಾಖೆ ತೀರುವಳಿ ನೀಡಿಲ್ಲ.ಇಷ್ಟೆಲ್ಲಾ ಸಮಸ್ಯೆಗಳಿದ್ದರೂ ರಾಜ್ಯ ಸರ್ಕಾರ ಭದ್ರಾ ಯೋಜನೆಯ ಹಗುರವಾಗಿ ತೆಗೆದುಕೊಂಡಿದೆ. ಇಲಾಖೆಗಳ ನಡುವೆ ಸಮನ್ವಯ ಸಾಧಿಸದೇ ಲೋಪವೆಸಗಿದೆ. ಜಲ ಸಂಪನ್ಮೂಲ ಇಲಾಖೆ ಸಚಿವ ಡಿ.ಕೆ.ಶಿವಕುಮಾರ್ ತುರ್ತಾಗಿ ಇಲಾಖಾವಾರು ಸಮನ್ವಯ ಸಮಿತಿ ಸಭೆ ಕರೆದು ಭೂ ಸ್ವಾಧೀನ ಸೇರಿದಂತೆ ಅರಣ್ಯ ಇಲಾಖೆ ಕ್ಲಿಯರೆನ್ಸ್ ಪಡೆಯಬೇಕು. ಎತ್ತಿನಹೊಳೆ ಯೋಜನೆಗೆ ರಾಜ್ಯ ಸರ್ಕಾರ ತೋರುವ ಆಸಕ್ತಿಯ ಭದ್ರಾ ಮೇಲ್ದಂಡೆಗೂ ತೋರಿಸಲಿ ಎಂದು ನೀರಾವರಿ ಅನುಷ್ಠಾನ ಹೋರಾಟ ಸಮಿತಿ ಕಾರ್ಯಾಧ್ಯಕ್ಷ ಲಿಂಗಾರೆಡ್ಡಿ ಹೇಳಿಕೆಯಲ್ಲಿ ಒತ್ತಾಯಿಸಿದ್ದಾರೆ.

# ನೀರಿನ ಅಭಾವ ತಪ್ಪಿಸಲು ತುಕ್ಕು ಹಿಡಿಯುತ್ತಿರುವ ಹ್ಯಾಂಡ್ ಪಂಪುಗಳನ್ನ ದುರಸ್ತಿಗೊಳಿಸಲು ಮನವಿ

» ಮಹದೇವಪುರ ಶಿವಮೂರ್ತಿ

ನಮ್ಮಜನ ವಿಶೇಷ

ಪರಶುರಾಂಪುರ: ಚಳ್ಳಕೆರೆ ಬರಪೀಡಿತ ತಾಲೂಕು, ವಿಪರೀತ ಬೇಸಿಗೆ ಜಳ ನಡುವೆ ವಿದ್ಯುತ್ ಕಣ್ಣಾಮುಚ್ಚಾಲೆಯಿಂದ ಕುಡಿಯುವ ನೀರಿನ ಅಭಾವ ತಪ್ಪಿಸಲುವಿವಿಧಗ್ರಾಮಗಳಲ್ಲಿರುವ ಹ್ಯಾಂಡ್ ಪಂಪು(ಕೈ ಪಂಪು) ಗಳನ್ನ ದುರಸ್ಥಿಗೊಳಿಸುವಂತೆ ಸಾರ್ವಜನಿಕರ ಜತೆ ದನ-ಕುರಿಗಾಹಿಗಳು ಮನವಿ ಮಾಡುತ್ತಿದ್ದಾರೆ.

ದಶಕಗಳ ಹಿಂದಕ್ಕೆ ಹೊರಳಿದರೆ ಪ್ರತಿ ಹಳ್ಳಿಗಳಲ್ಲಿ ಇಂದಿಗೂ ಜನರು ನೀರಿಗೆ ಆಶ್ರಿಯಿಸಿದ್ದು ಹ್ಯಾಂಡ್ ಪಂಪುಗಳನ್ನ. ಇತ್ತೀಚಿನ ದಿನಗಳಲ್ಲಿ ಅಂತಹ ಕೊಳವೆ ಬಾವಿಗಳ ಬಳಕೆ ಕಡಿಮೆಯಾಗಿದೆ. ಮರಳಿ ಅದರ ಅವಶ್ಯವಾಗಿದ್ದರಿಂದ ಸಂಬಂಧ ಪಟ್ಟವರು ಅವುಗಳ ದುರಸ್ಥಿಗೆ ಒತ್ತಾಯಿಸುತ್ತಿದ್ದಾರೆ.

ವಿದ್ಯುತ್ ಚಾಲಿತ ಕೊಳವೆ ಬಾವಿಗಳು ಬಂದಂತೆ ಹ್ಯಾಂಡ್ ಪಂಪು ಕೊಳವೆ ಬಾವಿಗಳಿಂದ ನೀರನ್ನ ತರುವುದು



## ಹ್ಯಾಂಡ್ ಪಂಪುಗಳಲ್ಲಿ ನೀರಿದೆ ದುರಸ್ಥಿಗೊಳಿಸಿ

ಬಯಲು ಸೀಮೆಯಲ್ಲಿ ನೂರಾರು ಅಡಿಗಳು ಬೋರ್ ಕೊರೆಸಿದರು ನೀರು ಸಿಗುತ್ತಿಲ್ಲಾ,ಈ ಮೊದಲು ಅಂತರ್ಜಲದ ಮೂಲ ಹುಡಕಿ ಹಾಕಿದ ಬಹುತೇಕ ಹ್ಯಾಂಡ್ ಪಂಪ್‌ಗಳಲ್ಲಿ ನೀರಿದೆ ಎನ್ನುವುದನ್ನ ಆಯಾ ಗ್ರಾಮಗಖಳ ಹಿರಿಯರು ಹೇಳುತ್ತಿದ್ದಾರೆ.ಕೆಲಾ ಗ್ರಾಪಂ ಮಟ್ಟದಲ್ಲಿ ಅವುಗಳಿಗೆ ವಿದ್ಯುತ್ ಮೋಟರ್ ಅಳವಡಿಸಿ ಜನರಿಗೆ ಕುಡಿಯುವ ನೀರನ್ನ ಒದಗಿಸುತ್ತಿರುವದನ್ನ ಇಂದಿಗೂ ಕಾಣಬಹುದು.ಆಗಾಗಿ ಕೆಟ್ಟು ಹೋದ ಹ್ಯಾಂಡ್ ಪಂಪುಗಳನ್ನ ಹುಡುಕಿ ದುರಸ್ಥಿಗೊಳಿಸಿದರೆ ಕರೆಂಟ್ ನೀರಿನ ಅಭಾವ ಉಂಟಾದಾಗ ಅದನ್ನ ಬಳಕೆ ಮಾಡಲು ಅನುಕೂಲ ಜತೆ ಎಲ್ಲರಿಗೂ ಅನುಕೂಲವಾಗಲಿದೆ. ಮಳೆ ಇಲ್ಲದೆ ಭೂ ತಾಯಿ ಬಾಯಿಬಿಟ್ಟಿರುವಾಗ ಜನ ಜಾನುವಾರುಗಳು ದಿನ್ನೆಗಳಲ್ಲಿ ಕುಡಿಯುವ ನೀರಿಗಾಗಿ ಅಲೆದರೆ,ಕೆಲ ಗ್ರಾಮಗಳ ಗೇಟ್‌ಗಳಲ್ಲಿ ಕುಡಿಯುವ ನೀರಿನ ಅಭಾವ ಇಂದಿಗೂ ಸಾರ್ವಜನಿಕರೂ ಎದುರಿಸುತ್ತಿದ್ದಾರೆ ಸಂಬಂಧ ಪಟ್ಟವರು ಇವುಗಳನ್ನ ದುರಸ್ಥಿಗೊಳಿಸುವಂತೆ ಮನವಿ ಮಾಡುತ್ತಿದ್ದಾರೆ.

ಗ್ರಾಮೀಣ ಭಾಗದ ಜನರು ನಿಲ್ಲಿಸಿದರು. ಅಲ್ಲದೆ ಬೇಸಿಗೆಯಲ್ಲಿ ನೀರಿನ ಬರ ತಟ್ಟುತ್ತಿರುವುದರಿಂದ ಮತ್ತೇ ಜನರು ಅವುಗಳ ಬಳಕೆಗೆ ಆಶ್ರಿಯಿಸುವಂತಾಗಿದೆ.

ಪ್ರತಿಗ್ರಾಮಗಳದೇವಸ್ಥಾನ,ಸಾರ್ವಜನಿಕ ಸ್ಥಳ,ಜಮೀನು,ಶಾಲಾ-ಕಾಲೇಜು ಸೇರಿದಂತೆ ನೀರಿನ ಸೌಲಭ್ಯಕ್ಕಾಗಿ ಹ್ಯಾಂಡ್ ಪಂಪುಗಳನ್ನ ಇರುವುದನ್ನ ಇಂದಿಗೂ ಕಾಣಬಹುದು.ಈಗ ಅವುಗಳು ಬಳಕೆ ಜತೆ ದುರಸ್ಥಿಗೆ ಯಾರು ಸಹಾ ಮುಂದಾಗದೆ ಅನಾಥವಾಗಿವೆ.ಸುತ್ತಮುತ್ತಲು ಗಿಡ ಗಂಟಿಗಳು ಬೆಳದಿವೆ.ತುಕ್ಕು ಹಿಡಿದು ಪುಡಿಯಾಗಿ ಉದುರಿವೆ.ಇನ್ನೂ ಕೆಲ ಹಳ್ಳಿಗಳಲ್ಲಿ ಇಂದಿಗೂ ಕೈ ಪಂಪುಗಳು ನೀರನ್ನ ಪೂರೈಸುತ್ತಿವೆ.ಆದ್ದರಿಂದ ಅವುಗಳನ್ನ ದುರಸ್ಥಿ ಮಡಿದರೆ ಕುಡಿಯುವ ನೀರಿಗೆ ಅನುಕೂಲವಗುತ್ತದೆ ಎಂದು ಸಾರ್ವಜನಿಕರು ಹೇಳುವರು.ಹಲವಡೆ ಸರಿಯಾದ ನಿರ್ವಹಣೆ ಇಲ್ಲದೆ ಮೂಲೆ ಗುಂಪಗಿವೆ.ಇವುಗಳನ್ನ ದುರಸ್ಥಿ ಮಡಬೇಕು ಎಂದು ಜನರು ಮನವಿ ಮಡಿದ್ದಾರೆ.

ಜನ ಜಾನುವಾರುಗಳಿಗೆ ಕುಡಿಯುವ ನೀರಿಗಾಗಿ ರಸ್ತೆ ಬದಿಗಳಲ್ಲಿ ಹ್ಯಾಂಡ್ ಪಂಪು ಹಾಕಿಸಿ ಅನುಕೂಲ ಮಾಡಲಾಗಿತ್ತು. ಅವುಗಳ ದುರಸ್ಥಿಯಿಲ್ಲದೆ,ಹತ್ತಾರು ಮೈಲಿ ಸುತ್ತಾಡಿಕೊಂಡು ಜನಕರುಗಳನ್ನ ನೀರನ್ನ ಹುಡಿಕಿಕೊಂಡು ಹೋಗುವ ಪರಿಸ್ಥಿತಿ ಬಂದಿದೆ.ಈಗ ಯಾರದರೂ ತೋಟಕ್ಕೆ ಹೋದರೆ ಕರೆಂಟ್ ಇಲ್ಲ ಎಂದರೆ,ಹಲವರು ಬೆಳಗೆ ಸಾಕಾಗುತ್ತಿಲ್ಲ ಎನ್ನುವರು.ಸದ್ಯ ಹ್ಯಾಂಡ್ ಪಂಪುಗಳಲ್ಲಿ ನೀರು ಇದೆ ಆದರೆ ದುರಸ್ಥಿಯಾದರೆ ಅನುಕೂಲವಾಗುತ್ತದೆ ಎಂದು ಕುರಿಗಾಹಿ ನಾಗರಾಜು ಹೇಳುವರು.

## ಫಾಸ್ಟ್ ನ್ಯೂಸ್

### ಕರಿಬಸಜಯ್ಯ ದೇವಸ್ಥಾನದಲ್ಲಿ ಶಿವರಾತ್ರಿ ಜಾಗರಣ ಮಹೋತ್ಸವ

» ದಾವಣಗೆರೆ

ಮಹಾಶಿವರಾತ್ರಿ ಹಬ್ಬ ಮತ್ತು ಜಾಗರಣೆ ಪ್ರಯುಕ್ತ ದಾವಣಗೆರೆ ಲೇಬರ್ ಕಾಲೋನಿಯಲ್ಲಿರುವ ನೋತನವಾಗಿ ನಿರ್ಮಿಸಿರುವ ಶ್ರೀ ಕರಿಬಸವೇಶ್ವರ ದೇವಸ್ಥಾನದಲ್ಲಿ ಶಿವರಾತ್ರಿ ಹಬ್ಬದ ಪ್ರಯುಕ್ತ ಜಾಗರಣೆ ಮತ್ತು ವಿಶೇಷ ಪೂಜಾ ಕಾರ್ಯಕ್ರಮವನ್ನ ಹಮ್ಮಿಕೊಳ್ಳಲಾಗಿದೆ. 10 ರಂದು ಸಂಜೆ 7 ಗಂಟೆಗೆ ಜಾಗರಣೆ ಪ್ರಯುಕ್ತ ಭಜನಾ ಕಾರ್ಯಕ್ರಮ. 11 ರ ಬೆಳಿಗ್ಗೆ ರುದ್ರಾಭಿಷೇಕ, ನಂತರ 9 ಗಂಟೆಗೆ ದೇವರ ಉತ್ಸವ ಮೆರವಣಿಗೆ ಮತ್ತು ಮಧ್ಯಾಹ್ನ 2 ಗಂಟೆಗೆ ಮಹಾಪ್ರಸಾದ ಎರ್ಪಡಿಸಲಾಗಿದೆ.2 ಮಂಗಳವಾರ ವಿಶೇಷ ಪೂಜೆಯ ನಂತರ ಪಳಾರ ಹಾಕಿಸುವುದು. 14 ರಂದು ಸಂಜೆ 6.30ಕ್ಕೆ ಪಳಾರ ಹಂಚುವುದು. ಈ ಮೂರು ದಿನಗಳಲ್ಲೊ ದೇವರಿಗೆ ವಿಶೇಷ ಪೂಜೆ ಮತ್ತು ಅಲಂಕಾರ ನೆಡೆಯುವುದು. ಮಹಾಶಿವರಾತ್ರಿ ನಿಮಿತ್ತ ಈ ಎಲ್ಲಾ ಕಾರ್ಯಕ್ರಮಗಳಲ್ಲಿ ಭಕ್ತರು ಭಾಗವಹಿಸಿ ಶ್ರೀ ಅಜ್ಜಯ್ಯನ ಕೃಪೆಗೆ ಪಾತ್ರರಾಗಲು ದೇವಸ್ಥಾನ ಸೇವಾ ಸಮಿತಿ ಅಧ್ಯಕ್ಷರಾದ ಪಿಎನ್ ಲೋಕೇಶಪ್ಪ ತಿಳಿಸಿದ್ದಾರೆ.

### ಖ್ಯಾತ ವಕೀಲರಾದ ಮಹೇಶ್ವರಪ್ಪ ಇನ್ನಿಲ್ಲ

» ಚಂದ್ರವಳ್ಳಿ ನ್ಯೂಸ್ ಚಿತ್ರದುರ್ಗ



ಚಿತ್ರದುರ್ಗ ನಗರದ ಕೆಳಗೋಟೆ, ಚರ್ಚ್ ಬಡಾವಣೆ ನಿವಾಸಿ ದಾಸಯ್ಯನ ಮಾಳಗೆ ಎಂ ಮಹೇಶ್ವರಪ್ಪ (88) ಶುಕ್ರವಾರ ನಿಧನರಾಗಿದ್ದಾರೆ. ಮೃತರಿಗೆ ಇಬ್ಬರು ಪುತ್ರಿಯರು, ಇಬ್ಬರು ಪುತ್ರರು ಸೇರಿದಂತೆ ಅಪಾರ ಬಂಧು ಮಿತ್ರರನ್ನು ಅಗಲಿದ್ದಾರೆ. ಮೃತರ ಅಂತ್ಯ ಸಂಸ್ಕಾರ ಹಿರಿಯೂರು ತಾಲ್ಲೂಕು ಐಮಂಗಳ ಹೋಬಳಿಯ ದಾಸಯ್ಯನ ಮಾಳಿಗೆಯಲ್ಲಿರುವ ಜಮೀನಿನಲ್ಲಿ ಶನಿವಾರ ಮಧ್ಯಾಹ್ನ 3 ಗಂಟೆಗೆ ಅಂತ್ಯ ಸಂಸ್ಕಾರ ನೆರವೇರಲಿದೆ ಎಂದು ವಕೀಲರಾದ ಎಂ. ಸುರೇಶ್ ತಿಳಿಸಿದ್ದಾರೆ.

**ಅಂತಿಮ ದರ್ಶನ :** ಚಿತ್ರದುರ್ಗ ನಗರದ ಕೆಳಗೋಟೆ, ಚರ್ಚ್ ಬಡಾವಣೆಯ 4ನೇ ಕ್ರಾಸ್ ನಲ್ಲಿರುವ ಸ್ವಗೃಹದಲ್ಲಿ ಮಾರ್ಚ್ 9 ರಂದು ಬೆಳಗ್ಗೆಯಿಂದ ಮಧ್ಯಾಹ್ನ 1 ಗಂಟೆವರೆಗೆ ಅಂತಿಮ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿದೆ.

**ಅಂತಿಮ ನಮನ :** ಚಿತ್ರದುರ್ಗ ನಗರದ ಹಿರಿಯ ವಕೀಲರಾದ ಎಂ ಮಹೇಶ್ವರಪ್ಪ ಇವರ ನಿಧನದಿಂದ ಅಪಾರ ನೋವು ಅಘಾತ ಉಂಟಾಗಿದೆ ಎಂದು ಮೃತರ ಆತ್ಮೀಯ ಸ್ನೇಹಿತರು ಹಾಗೂ ಜಿಲ್ಲಾ ವಕೀಲರ ಸಂಘದ ಮಾಜಿ ಅಧ್ಯಕ್ಷರಾದ ಎನ್.ಜಿ ಕೃಷ್ಣಮೂರ್ತಿ, ಎಂ. ಸುರೇಶ್ ಇವರು ತಿಳಿಸಿ, ಅಂತಿಮ ದರ್ಶನ ಪಡೆದು ಮೃತರ ಆತ್ಮಕ್ಕೆ ಶಾಂತಿ ದೊರೆಯಲಿ ಎಂದು ಪ್ರಾರ್ಥಿಸಿದ್ದಾರೆ.

### ಬಿಜೆಪಿ ರಾಜ್ಯ ಎಸ್‌ಟಿ ಮೋರ್ಚಾದ ರಾಜ್ಯ ಕಾರ್ಯಕಾರಿಣಿ ಸದಸ್ಯರಾಗಿ ಗುಮ್ಮನೂರು ಶ್ರೀನಿವಾಸ್, ದುರ್ಗೇಶ್





» ದಾವಣಗೆರೆ

ಭಾರತೀಯ ಜನತಾ ಪಾರ್ಟಿ ರಾಜ್ಯ ಎಸ್ ಟಿ ಮೋರ್ಚಾದ ರಾಜ್ಯ ಕಾರ್ಯಕಾರಣಿ ಸದಸ್ಯರನ್ನಾಗಿ ಗುಮ್ಮನೂರು ಶ್ರೀನಿವಾಸ್ ಹಾಗೂ ಹೆ[illegible] ಬಿ ದುರ್ಗೇಶ್ ಇವರುಗಳನ್ನು ಆಯ್ಕೆ ಮಾಡಲಾಗಿದೆ. ಬಿಜೆಪಿ ಎಸ್ ಟಿ ಮೋರ್ಚಾದ ರಾಜ್ಯಾಧ್ಯಕ್ಷರಾದ ಬಂಗಾರು ಹನುಮಂತು ನೇತೃತ್ವದಲ್ಲಿ ನಡೆದ ರಾಜ್ಯ ಕಾರ್ಯಕಾರಣಿ ಸಭೆಯಲ್ಲಿ ಆಯ್ಕೆ ಮಾಡಲಾಯಿತು. ಈ ಹೊಣೆಗಾರಿಕೆಯನ್ನು ಅತ್ಯಂತ ಜವಾಬ್ದಾರಿತವಾಗಿ ನಿರ್ವಹಿಸುತ್ತಾ ಪಕ್ಷದ ಸಂಘಟನೆಯನ್ನು ತಳ ಮಟ್ಟದಲ್ಲಿ ಸದೃಢಗೊಳಿಸುತ್ತಾ ಮುಂಬರುವ ಎಲ್ಲಾ ರೀತಿಯ ಸವಾಲುಗಳನ್ನು ಎದುರಿಸಲು ಶಕ್ತಿ ತುಂಬುತ್ತಾ ಪಕ್ಷದ ವರ್ಚಸ್ಸನ್ನು ಹೆಚ್ಚಿಸುವಲ್ಲಿ ಸತತ ಶ್ರಮಿಸಬೇಕು ಎಂದು ಆಶಿಸುವುದಾಗಿ ಬಂಗಾರು ಹನುಮಂತು ತಿಳಿಸಿದ್ದಾರೆ. ಈ ಸಂದರ್ಭದಲ್ಲಿ ರಾಜ್ಯ ಉಪಾಧ್ಯಕ್ಷ ಬೆಳ್ಳಿ ಗಂಗಾಧರ, ರಾಜ್ಯ ಕಾರ್ಯದರ್ಶಿ ಮಹಾಂತೇಶ್ ನಾಯಕ್, ಕಾರ್ಯಾಲಯ ಕಾರ್ಯದರ್ಶಿ ಶಿವಶಂಕರ್ ಉಪಸ್ಥಿತರಿದ್ದರು.

# ಬಿಜೆಪಿ ಹಾಗೂ ಕಾಂಗ್ರೆಸ್ ಸರ್ಕಾರದ ಆಡಳಿತದಲ್ಲಿ ಸಂವಿಧಾನದ ಆಶಯಗಳು ಪೂರೈಕೆಯಾಗಿಲ್ಲ: ಬಿಎಸ್‌ಪಿ

» ಚಳ್ಳಕೆರೆ

ರಾಷ್ಟ್ರದ ಸುರಕ್ಷತೆ ಹಾಗೂ ಸಂರಕ್ಷಣೆಗಾಗಿ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ರಚಿಸಿದ ಸಂವಿಧಾನದಿಂದ ನಮ್ಮೆಲ್ಲಾ ಕಾರ್ಯಚಟುವಟಿಕೆಗಳು ನಡೆಯುತ್ತಾ ಬಂದಿವೆ. ಭಾರತವಷ್ಟೇಯಲ್ಲ, ವಿಶ್ವದಲ್ಲಿಯೂ ಸಹ ಭಾರತದ ಸಂವಿಧಾನ ವಿಶೇಷ ಗೌರವ ಪಡೆದಿದೆ. ಇಂತಹ ಸಂದರ್ಭದಲ್ಲಿ ಕೇಂದ್ರದಲ್ಲಿ ಅಧಿಕಾರ ನಡೆಸುತ್ತಿರುವ ಬಿಜೆಪಿ ಸರ್ಕಾರ ಸಂವಿಧಾನವನ್ನು ಬದಲಾವಣೆ ಮಾಡುವ ಹುನ್ನಾರ ನಡೆಸಿದ್ದು, ಇದನ್ನು ಪ್ರತಿಭಟನೆ ಬಹುಜನ ಸಮಾಜ ಪಾರ್ಟಿ ಹೋರಾಟ ನಡೆಸುತ್ತಿದ್ದು, ಮಾ.9ರ ಶನಿವಾರ ಬೆಂಗಳೂರು ದೇವರನಹಳ್ಳಿಯ ಅಂಬೇಡ್ಕರ್ ಭವನದಲ್ಲಿ ಬೃಹತ್ ಸಮಾವೇಶ ಹಮ್ಮಿಕೊಂಡಿದ್ದು, ಸಾವಿರಾರು ಸಂಖ್ಯೆಯ ಬಿಎಸ್‌ಪಿ ಕಾರ್ಯಕರ್ತರು ಸಮಾವೇಶದಲ್ಲಿ ಭಾಗವಹಿಸುವರು ಎಂದು ಜಿಲ್ಲಾಧ್ಯಕ್ಷ ಎನ್.ಪ್ರಕಾಶ್ ತಿಳಿಸಿದರು.



ಅವರು, ಪ್ರವಾಸಿಮಂದಿರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಭಾಗವಹಿಸಿ ಮಾತನಾಡಿ, ಬಿಜೆಪಿ, ಕಾಂಗ್ರೆಸ್ ಎರಡೂ ಸರ್ಕಾರಗಳು ಡಾ.ಬಿ.ಆರ್.ಅಂಬೇಡ್ಕರ್‌ರವರ ಸಂವಿಧಾನದ ಆಶೋತ್ತರಗಳನ್ನು ಈಡೇರಿಸುವಲ್ಲಿ ವಿಫಲರಾಗಿದ್ದಾರೆ. ಈ ನಿಟ್ಟಿನಲ್ಲಿ ಮುಂಬರುವ ದಿನಗಳಲ್ಲಿ ಬಹುಜನಸಮಾಜ ಪಾರ್ಟಿ ಚುನಾವಣೆಯಲ್ಲಿ ಹೆಚ್ಚಿನ ಸ್ಥಾನಗಳಿಸಿ ಅಧಿಕಾರ ಪಡೆದು ಸಂವಿಧಾನ ರಕ್ಷಣೆಯ ಜೊತೆಗೆ ಬಡವರ ಕಲ್ಯಾಣಕ್ಕೂ ಸಹ ಶ್ರಮಿಸಲಿದೆ ಎಂದರು. ರಾಜ್ಯಮಟ್ಟದ ಸಮಾವೇಶದಲ್ಲಿ ಬಿಎಸ್‌ಪಿಯ ರಾಷ್ಟ್ರೀಯ ಮುಖಂಡರಾದ ರಾಮ್‌ಜೀಗೌತಮ್, ನಿತಿನ್‌ಸಿಂಗ್, ಎಂ.ಗೋಪಿನಾಥ, ಎಂ.ಕೃಷ್ಣಮೂರ್ತಿ, ರಾಜ್ಯಾಧ್ಯಕ್ಷ ಮಾರಸಂದ್ರಮುನಿಯಪ್ಪ, ಡಿ.ಎಸ್. ಗಂಗಾಧರ ಮುಂತಾದವರು ಭಾಗವಹಿಸುವರು.

# ಭಾರತೀಯ ಯೋಗ ಶಿಕ್ಷಣ ಸಂಸ್ಥೆಯಿಂದ ಅಂತರಾಷ್ಟ್ರೀಯ ಮಹಿಳಾ ದಿನ ಆಚರಣೆ




» ಚಿತ್ರದುರ್ಗ

ಚಿತ್ರದುರ್ಗ ಜಿಲ್ಲೆಯಾದ್ಯಂತ ಶುಕ್ರವಾರ ಅಂತರಾಷ್ಟ್ರೀಯ ಮಹಿಳಾ ದಿನದ ಅಂಗವಾಗಿ ಅನೇಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು ನಗರದ ಭಾರತೀಯ ಯೋಗ ಶಿಕ್ಷಣ ಸಂಸ್ಥೆ ಚಿತ್ರದುರ್ಗ ವತಿಯಿಂದ ಬ್ಯಾಂಕ್ ಕಾಲೋನಿಯ ಯೋಗ ಕೇಂದ್ರದಲ್ಲಿ ಹಮ್ಮಿಕೊಂಡಿದ್ದ ಕಾರ್ಯಕ್ರಮವನ್ನು ಹಿರಿಯ ಯೋಗ ಸಾಧಕಿ ಶ್ರೀಮತಿ ವನಜಾಕ್ಷಮ್ಮ ಹಾಗೂ ಬಾಲಕಿ ಕು. ಮೋನಿಷ ರವರು ದೀಪ ಬೆಳಗಿಸಿ ಕೇಕ್ ಕತ್ತರಿಸುವುದರೊಂದಿಗೆ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಅಂತರರಾಷ್ಟ್ರೀಯ ಮಹಿಳಾ ದಿನವು ಮಹಿಳೆಯರ ಸಾಮರ್ಥ್ಯವನ್ನು ಅರಿತುಕೊಳ್ಳಲು ಮತ್ತು ಪ್ರತಿಯೊಬ್ಬ ಮಹಿಳೆ ಮತ್ತು ಹೆಣ್ಣು ಸುರಕ್ಷಿತವಾಗಿ ಮತ್ತು ಮಹಿಳೆಯರು ಸಬಲರಾಗಿ ಜಗತ್ತನ್ನು ಮುನ್ನಡೆಸಲು ನಮಗೆಲ್ಲರಿಗೂ ನೆನಪಿಸುತ್ತದೆ. ನಾವು ಇಂದು 49 ನೇ ವರ್ಷದ ಅಂತರಾಷ್ಟ್ರೀಯ ಮಹಿಳಾ ದಿನವನ್ನು ಆಚರಿಸುತ್ತಿರುವ ಈ ಸಂಧರ್ಭದಲ್ಲಿ ಈಗಲೂ ನಾವು ಲಿಂಗ ಸಮಾನತೆಯನ್ನು ಸಾಧಿಸುವಲ್ಲಿ ಹೋರಾಡುತ್ತಿರುವುದು ವಿಪರ್ಯಾಸವೆನಿಸುತ್ತದೆ ಮಹಿಳೆಯರು ಇದುವರೆಗೆ ಸಾಧಿಸಿರುವ ಪ್ರಗತಿ ಮತ್ತು ಮುಂದೆ ಇರುವ ಅವಳಿಗೆ ಎದುರಾಗುವ ಸವಾಲುಗಳನ್ನು ಪ್ರತಿಬಿಂಬಿಸುವುದು ಅತ್ಯಗತ್ಯವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಭಾರತೀಯ ಯೋಗ ಶಿಕ್ಷಣ ಸಂಸ್ಥೆ ಅಧ್ಯಕ್ಷ ಹಾಗೂ ಯೋಗ ಪ್ರಚಾರಕ ರವಿ ಕೆ.ಅಂಬೇಕರ್ ಎಲ್ಲಾ ಮಹಿಳಾ ಸಾಧಕಿಯರಿಯ ಶುಭಾಶಯ ಕೋರಿದರು. ಕಾರ್ಯಕ್ರಮದಲ್ಲಿ ನಿವೃತ್ತ ಹಿರಿಯ ಪೋಲಿಸ್ ಅಧಿಕಾರಿ ಮಲ್ಲಿಕಾರ್ಜುನಚಾರ್ ಸೇರಿದಂತೆ ಯೋಗ ಕೇಂದ್ರದ ಯೋಗ ಸಾಧಕಿಯರಾದ ಅಂಬುಜಾಕ್ಷಿ, ನಾಗಲತಾ, ಶೈಲಾರೆಡ್ಡಿ, ರೂಪ ಚಿತ್ರ, ರೇಣುಕಾ ಭಾಗ್ಯ ಮೀನಾಕ್ಷಿ ನಾಗರತ್ನ ಸುಧಮ್ಮ ಸುಮಾ ಗೀತಾ ಶೈಲಜಾ, ಪ್ರೇಕುಮು ಕುಮುದಾ ಹಾಜರಿದ್ದರು.

# ಪಿ.ಓಬನಹಳ್ಳಿ-ಅಖಂಡ ಕರ್ನಾಟಕ ರಾಜ್ಯ ರೈತ ಸಂಘದ ಶಾಖೆ ಉದ್ಘಾಟನೆ

» ಪರಶುರಾಂಪುರ

ಸಾಧಕರ, ಅಭಿಮಾನದ ಭಾಷಣಗಳ ಮಾತುಗಳನ್ನ ಕೇಳಿದಾಗ ಬರುವ ಕಿಚ್ಚಿನ ಮೂಲಕ ಜಾಗೃತಾರಗುತ್ತಾ ಸಂಘಟನೆಗಳಲ್ಲಿ ತೊಡಗಿಸಿಕೊಳ್ಳುತ್ತಾ,ಮಹಿಳೆಯರು ಆರ್ಥಿಕ ಸಬಲರಾಗಬೇಕು ಎಂದು ಅ.ಕ.ರಾ.ರೈ.ಸಂಘದ ಮೈಸೂರು ಮಹಿಳಾ ಘಟಕದ ಅಧ್ಯಕ್ಷಿಣಿ ಉಮಾದೇವಿ ತಿಳಿಸಿದರು.

ಸಮೀಪದ ಓಬನಹಳ್ಳಿ ಗ್ರಾಮದಲ್ಲಿ ಅಖಂಡ ಕರ್ನಾಟಕ ರೈತ ಸಂಘದಿಂದ ಶುಕ್ರವಾರ ಆಯೋಜಿಸಿದ್ದಾ ನೂತನ ಗ್ರಾಮ ಶಾಖೆ ಉದ್ಘಾಟನೆ ಹಾಗೂ ರೈತ ಜಾಗೃತಿ ಸಭೆಯಲ್ಲಿ ಮಾತನಾಡಿರು.ಎಲ್ಲಾ ರಂಗದಲ್ಲೂ ಸಿಶಕ್ತಿ ಗುಡುಗುತ್ತಿರುವಾ ನಿಮ್ಮಲ್ಲೂ ಅಂತಹ ಗುಣಗಳನ್ನ ಬೆಳಗಿಸಿಕೊಳ್ಳ ಬೇಕೆಂದು ಮಹಿಳಾ ದಿನಾಚರಣೆಯ ಶುಭಾಯಗಳನ್ನ ತಿಳಿಸಿದರು. ಬರ ಬಂದರು ಯಾವ ಸರಕಾರಗಳಿಗೂ ಅನ್ನದಾತರ ಕಡೆ ಗಮನಿಸುತ್ತಿಲ್ಲಾ,ಅಗಾಗಿ ಚಳವಳಿ ಜತೆ ಹೋರಟಕ್ಕೆ ಇಳಿದರೆ ಜಯ ಸಿಗುವುದು,



ಭದ್ರಾ ಮೇಲ್ದಂಡೆ,ಪರಿಹಾರದ ಹಣ ಸೇರಿದಂತೆ ರೈತರ ಸಮಸ್ಯೆಯನ್ನ ಆಲಿಸುತ್ತಿಲ್ಲಾ,ಇದಕ್ಕೆಲ್ಲಾ ಹೋರಾಟವೇಉತ್ತರಎಂದುಅಖಂಡಕರ್ನಾಟಕ ರಜ್ಯ ರೈತ ಸಂಘದ ಜಿಲ್ಲಾ ಕಾರ್ಯದರ್ಶಿ ಸಿದ್ದಪ್ಪ ತಿಳಿಸಿದರು.ಸಂಘದ ತಾಲೂಕಧ್ಯಕ್ಷ ಚಿಕ್ಕಣ್ಣ ಮಾತನಾಡಿ,ಬರುವ 18 ತಾರೀಖಿನೊಳಗೆ ಬೆಳೆ ಪರಿಹಾರದ ಹಣ ಬರದಿದ್ದರೇ ಸಂಬಂಧಪಟ್ಟ ಎಲ್ಲಾ ಸರಕಾರಿ ಕಚೇರಿಗಳಿಗೆ ಬೀಗ ಹಾಕುವುದರ ಜತೆ ತಾಲೂಕು ಆಫೀಸ್‌ಗೆ ಮುತ್ತಿಗೆ ಹಾಕಲಾಗುವುದು ಎಂದು ಎಚ್ಚರಿಸಿದರು. ಸಂದರ್ಭದಲ್ಲಿ ಪಿ.ಓಬನಹಳ್ಳಿ ಐಟಕದ ಅಧ್ಯಕ್ಷ ಸಿ.ಟಿ.ಹಾಲರಾಮೇಶ್ವರ,ಜಿಲ್ಲಾ ಕಾರ್ಯಧ್ಯಕ್ಷ ವೆಂಕಟರಮಣಪ್ಪ,ತಾಲೂಕು ಉಪಾಧ್ಯಕ್ಷ ಜಂಪಣ್ಣ,ಕಾರ್ಯಧ್ಯಕ್ಷ ಹನಮಂತರಾಯ, ಕಾರ್ಯದರ್ಶಿ ಚೌಳುರು ಪ್ರಕಾಶ್,ಹೋಬಳಿ ಘಟಕದ ಅಧ್ಯಕ್ಷ ನವೀನ್,ಉಪಾಧ್ಯಕ್ಷ ಕೊಂಡ್ಲಿ ಪರಮೇಶ್ವರಪ್ಪ,ಓಬನಹಳ್ಳಿ ಘಟಕದ ಉಪಾಧ್ಯಕ್ಷ ಈರಣ್ಣ ಗ್ರಾಮಸ್ಥರಿದ್ದರು.

## ಪ್ರಮುಖ ಸುದ್ದಿ

### ಮಾರ್ಚ್ 18ರೊಳಗೆ ರೈತರ ಖಾತೆಗೆ ಬೆಳೆನಷ್ಟ, ಬೆಳೆ ವಿಮೆ ಹಣ ಜಮವಾಗದೇ ಇದ್ದಲ್ಲಿ ತಾಲ್ಲೂಕು ಕಚೇರಿಗೆ ಬೀಗ

# ಕೇಂದ್ರ, ರಾಜ್ಯ ಸರ್ಕಾರಗಳು ರೈತರ ಶೋಷಣೆಯಲ್ಲಿ ತೊಡಗಿವೆ

» ಚಳ್ಳಕೆರೆ

ಕಳೆದ ಹಲವಾರು ತಿಂಗಳುಗಳಿಂದ ಪ್ರಧಾನಮಂತ್ರಿ ಸಫಲ್‌ಭೀಮಾ ಯೋಜನೆಯಡಿ ತಾಲ್ಲೂಕಿನ ರೈತರಿಗೆ ಖಾಸಗಿ ಬೆಳೆವಿಮಾ ಕಂಪನಿ ಸುಮಾರು 220 ಕೋಟಿ ಹಣ ನೀಡಬೇಕಿದ್ದು, ಹಣ ನೀಡದೆ ರೈತರನ್ನು ವಂಚಿಸುತ್ತಿರುವ ಖಾಸಗಿ ಬೆಳೆವಿಮೆ ಕಂಪನಿ ಹಾಗೂ ಸರ್ಕಾರದ ವಿರುದ್ದ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು. ಮಾರ್ಚ್ 18ರೊಳಗೆ ರೈತರ ಖಾತೆಗೆ ಬೆಳೆನಷ್ಟ ಪರಿಹಾರ ಹಾಗೂ ಫಸಲ್‌ಭೀಮಾ ಯೋಜನೆಯ ಹಣ ಜಮವಾಗದಿದ್ದರೆ ತಾಲ್ಲೂಕು ಕಚೇರಿಗೆ ಬೀಗಜಡಿಯುವುದಾಗಿ ರೈತ ಸಂಘಟನೆಯ ಮುಖಂಡರು ತಿಳಿಸಿದ್ದಾರೆ.

ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರುಸೇನೆ(ಪುಟ್ಟಣ್ಣಯ್ಯಬಣ) ರಾಜ್ಯ ಉಪಾಧ್ಯಕ್ಷ ಕೆ.ಪಿ.ಭೂತಯ್ಯ ಮಾತನಾಡಿ, ಈ ಹಿಂದೆ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಪ್ರತಿಭಟನೆ ನಡೆಸಿದಾಗ ಮಧ್ಯಪ್ರವೇಶಿಸಿದ್ದ ಜಿಲ್ಲಾಧಿಕಾರಿಗಳು



ಖಾಸಗಿವಿಮಾ ಕಂಪನಿಗಳೊಂದಿಗೆ ಆಗಮಿಸಿ ಫೆ.29ರೊಳಗೆ ಹಣ ಪಾವತಿಸುವ ಭರವಸೆ ನೀಡಿದ ನಂತರ ಮುಷ್ಕರ ವಾಪಾಸ್ ಪಡೆಯಲಾಗಿತ್ತು. ಆದರೆ, ಈಗ ಕೇಳಿದರೆ ಪರಿಶೀಲನೆ ಹಂತದಲ್ಲಿದ್ದು, ಮುಂದಿನ ದಿನಗಳಲ್ಲಿ ವಿತರಿಸುವುದಾಗಿ ಹೇಳುತ್ತಾರೆ. ಈಗಾಗಲೇ ರೈತರು ಹಲವಾರು ಸಮಸ್ಯೆಗಳ ಜಂಟಾಟದಲ್ಲಿ ಮುಳುಗಿದ್ದು, ಈ ಎರಡೂ ಹಣ ರೈತರಿಗೆ ಸೇರಿದರೆಮಾತ್ರ ರೈತ ಬದುಕಲು ಸಾಧ್ಯವಾಗುತ್ತದೆ. ಆದ್ದರಿಂದ ಮಾರ್ಚ್ 18ಸೋಮವಾರ ತಾಲ್ಲೂಕು ಕಚೇರಿಗೆ ಮುತ್ತಿಗೆಹಾಕಿ ಕಚೇರಿಗೆ ಬೀಗಜಡಿದು ಪ್ರತಿಭಟನೆ ನಡೆಸಲಾಗುವುದು ಎಂದರು.

ರೈತ ಸಂಘದ ರಾಜ್ಯ ಉಪಾಧ್ಯಕ್ಷ (ಪ್ರೊ.ಬಣ) ರೆಡ್ಡಿಹಳ್ಳಿ ವೀರಣ್ಣ ಮಾತನಾಡಿ, ರಾಷ್ಟ್ರಕ್ಕೆ ಅನ್ನ ನೀಡುವ ರೈತನಿಗೆ ಖಾಸಗಿ ಬೆಳೆವಿಮೆ ಕಂಪನಿಗಳು ದ್ರೋಹ ಬಗೆಯುತ್ತಿವೆ. ಕಳೆದ ಜುಲೈ 31ರೊಂಗೆ ಕಡ್ಡಾಯವಾಗಿ ಹಣ ಪಾವತಿಮಾಡಿಸಿಕೊಂಡು ಹಣ ನೀಡುವ ಸಂದರ್ಭದಲ್ಲಿ ಇಲ್ಲಸಲ್ಲದ ಸಬೂಬು ಹೇಳುತ್ತಾರೆ.ಖಾಸಗಿಬೆಳೆವಿಮೆಕಂಪನಿಗಳಿಗೆ ಪರೋಕ್ಷವಾಗಿ ಸರ್ಕಾರ ಮತ್ತು ಇಲಾಖೆ ಅಧಿಕಾರಿಗಳು ಸಹಕಾರ ನೀಡುತ್ತಿದ್ದಾರೆ. ಇದರಿಂದ ರೈತರಿಗೆನ್ಯಾಯಯುತವಾಗಿ ದೊರೆಯಬೇಕಾದ ಹಣ ದೊರೆಯುತ್ತಿಲ್ಲ. ರೈತ ಸಂಘದ ಹೋರಾಟಕ್ಕೆ 50 ವರ್ಷಗಳ ಇತಿಹಾಸವಿದೆ. ಮಾರ್ಚ್ 18ರಂದು ಅಧಿಕಾರಿಗಳಿಗೆ ದಿಗ್ಬಂಧನ, ತಾಲ್ಲೂಕು ಕಚೇರಿಗೆ ಬೀಗಜಡಿದು ನೂರಾರು ಸಂಖ್ಯೆಯ ರೈತರು ಪ್ರತಿಭಟನೆ ಮಾಡಲಿದ್ದಾರೆ. ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ರೈತ ವಿರೋಧಿ ನೀತಿ ಅನುಸರಿಸುವ ಮೂಲಕ ರೈತರ ಬದುಕನ್ನು ಬೀದಿಗೆ ತಳ್ಳಿದೆ ಎಂದು ಅಸಮದಾನ ವ್ಯಕ್ತಪಡಿಸಿದರು.

ಅಖಂಡ ಕರ್ನಾಟಕ ರೈತ ಸಂಘದ ತಾಲ್ಲೂಕು ಅಧ್ಯಕ್ಷ ಚಿಕ್ಕಣ್ಣ ಮಾತನಾಡಿ, ಸರ್ಕಾರ ಹಾಗೂ ಕೃಷಿ ಇಲಾಖೆ ಅಧಿಕಾರಿಗಳು ಖಾಸಗಿ ಬೆಳೆವಿಮಾ ಕಂಪನಿಯ ಮೇಲೆ ನಿಯಂತ್ರಣ ಹೊಂದಿಲ್ಲ. ಅವರ ಕಣ್ಣುದುರೇ ರೈತರ ಶೋಷಣೆ ನಡೆಯುತ್ತಿದ್ದರೂ ಕಾನೂನು ಕ್ರಮಕ್ಕೆ ಮುಂದಾಗಿಲ್ಲ. ತಾಲ್ಲೂಕಿನ ಪಿ.ಮಹದೇವರಪು ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬೆಳೆನಷ್ಟ ಪರಿಹಾರ ಸುಮಾರು 3.91ಕೋಟಿ ಅವ್ಯವಹಾರ ನಡೆದಿದ್ದರೂ ಸರ್ಕಾರ ಸೂಕ್ತ ತನಿಖೆ ಕೈಗೊಂಡಿಲ್ಲ. ರೈತರಿಗೆ ಸರ್ಕಾರ ಮೇಲೆ ಇರುವ ನಂಬಿಕೆ ಕಡಿಮೆಯಾಗುತ್ತಿದೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ರೈತ ಸಂಘ ತಾಲ್ಲೂಕು ಅಧ್ಯಕ್ಷ ಶ್ರೀಕಂಠಮೂರ್ತಿ, ಹಂಪಣ್ಣ, ತಿಪ್ಪೇಸ್ವಾಮಿ ಮುಂತಾದವರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ದೇವರಹಟ್ಟಿಗೆ ಮೌಲಾನ ಅಜಾದ್ ಶಾಲೆ : ಮಹಮದ್ ಸಿರಾಜ್



» ದಾವಣಗೆರೆ

ಅಲ್ಪಸಂಖ್ಯಾತರ ಹೆಚ್ಚಿರುವ ದಾವಣಗೆರೆ ತಾಲೂಕಿನ ದೇವರಹಟ್ಟಿ ಗ್ರಾಮದಲ್ಲಿ ಮೌಲಾನ ಆಜಾದ್ ಶಾಲೆ ತರುವ ಪ್ರಯತ್ನ ಮಾಡುವುದರ ಜೊತೆಗೆ ಈ ಗ್ರಾಮಕ್ಕೆ ಮುಂದಿನ ಶೈಕ್ಷಣಿಕ ವರ್ಷದಲ್ಲಿ ಪ್ರೌಢಶಾಲೆಯನ್ನು ಮಂಜೂರು ಮಾಡಿಸುವುದಾಗಿ ಜಿಲ್ಲಾ ವಕ್ಫ ಮಂಡಳಿ ಅಧ್ಯಕ್ಷರಾದ ಮಹಮದ್ ಸಿರಾಜ್ ಭರವಸೆ ನೀಡಿದ್ದಾರೆ. ತಾಲೂಕಿನ ದೇವರಹಟ್ಟಿಯ ಸರ್ಕಾರಿ ಉರ್ದು ಹಿರಿಯ ಪ್ರಾಥಮಿಕ ಶಾಲೆಯ ವಾರ್ಷಿಕೋತ್ಸವ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದ ಅವರು, ಉಡುಪಿ ಜಿಲ್ಲೆಯಲ್ಲಿ ಶೈಕ್ಷಣಿಕವಾಗಿ ಮುಂದುವರೆದಿದ್ದು,ಅದರಂತೆ ದಾವಣಗೆರೆ ಜಿಲ್ಲೆಯ ಶಿಕ್ಷಣದ ಶಕ್ತಿಯನ್ನು ಅರಿತುಕೊಳ್ಳಬೇಕೆಂದರು. ಮತ್ತೋರ್ವ ಮುಖ್ಯ ಅತಿಥಿಯಾದಉಡುಪಿ ಜಿಲ್ಲೆಯ ವಕ್ಫ ಮಂಡಳಿ ಅಧ್ಯಕ್ಷ ಯಾಯ್ಯ ಸಾಬ್ ಮಾತನಾಡಿ, ಮಕ್ಕಳಿಗೆ ಶೈಕ್ಷಣಿಕವಾಗಿ ಪ್ರಗತಿ ಸಾಧಿಸಿ ಭವಿಷ್ಯ ರೂಪಿಸಿಕೊಳ್ಳುವಂತೆ ತಿಳಿ ಹೇಳಿದರು. ಸಸಿಗೆ ನೀರಿರುವುದರ ಮೂಲಕ ಶಾಲಾ ವಾರ್ಷಿಕೋತ್ಸವವನ್ನು ಶಾಲಾ ಶಿಕ್ಷಣ ಇಲಾಖೆ ಡಿಡಿಪಿಐ ಕಚೇರಿ ದಾವಣಗೆರೆ ಇಸಿಓ ಹಿದಾಯತ್ ವುಲ್ಲಾ ಅನ್ಸಾರಿ ಉದ್ಘಾಟಿಸಿದರು.ಪ್ರಾರಂಭದಲ್ಲಿ ಶಾಲೆಯ ಮುಖ್ಯೋಪಾಧ್ಯಾಯಿನಿ ಸ್ವಾಗತಿಸಿ ನಿರೂಪಿಸಿದರು.ಈ ಸಂದರ್ಭದಲ್ಲಿ ಶಾಲಾ ಅಭಿವೃದ್ಧಿ ಮಂಡಳಿ ಅಧ್ಯಕ್ಷೆ ಸಮೀಮ್ ಭಾನು ಅಧ್ಯಕ್ಷತೆ ವಹಿಸಿದ್ದರು, ಶ್ರೀಮತಿ ಸಿದ್ದಿಖಾ ಮುಝುಮಿಲ್, ಅಮೀರ್ ಇರ್ಷಾದ್, ಗೌಹರ್ ಬಾನು,ಕಲೀಂ ವುಲ್ಲಾ ಪಟೇಲ್, ಶಕೀಲಾ ರಹಮ್ಮತ್ ವುಲ್ಲಾ,ಕೆಂಚಮ್ಮ ಮಂಜಪ್ಪ,ನಾಜೀಮ ಸಮಿ ವುಲ್ಲಾ, ಸುಲೇಮಾನ್ ಸಾಹೇಬ್, ಸೇರಿದಂತೆ ಗ್ರಾಮದ ಮುಖಂಡರುಗಳು ಹಾಗೂ ಶಿಕ್ಷಣ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

### 11ರಂದು ರೈತರಿಗೆ ತರಬೇತಿ

» ಚಿತ್ರದುರ್ಗ

ಹಿರಿಯೂರು ತಾಲ್ಲೂಕಿನ ಬಬ್ಬೂರುಫಾರಂನ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಇದೇ ಮಾರ್ಚ್ 11ರಂದು ಬೆಳಿಗ್ಗೆ 10.30ಕ್ಕೆ ಜಿಲ್ಲೆಯ ರೈತರಿಗೆ ಸಮಗ್ರ ಕೃಷಿ ಪದ್ದತಿ ಮತ್ತು ವೈಜ್ಞಾನಿಕ ಕಳೆ ನಿರ್ವಹಣೆ ಕುರಿತು ರೈತರಿಗೆ ಒಂದು ದಿನದ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ತರಬೇತಿ ಕಾರ್ಯಕ್ರಮದಲ್ಲಿ ಬೆಂಗಳೂರು ಜಿಕೆವಿಕೆ ಕೃಷಿ ವಿದ್ಯಾನಿಲಯದ ಸಮಗ್ರ ಕೃಷಿ ಪದ್ಧತಿಗಳ ವಿಭಾಗದ ಪ್ರಾಧ್ಯಾಪಕ ಡಾ.ಎಂ.ಟಿ.ಸಂಜಯ್ ಅವರು, ಸಮಗ್ರ ಕೃಷಿ ಪದ್ದತಿ ಮತ್ತು ವೈಜ್ಞಾನಿಕ ಕಳೆ ನಿರ್ವಹಣೆ ಕುರಿತು ವಿಷಯ ಮಂಡನೆ ಮಾಡುವರು. ಆಸಕ್ತ 50 ಜನ ರೈತಭಾಂದವರು ತರಬೇತಿಯಲ್ಲಿ ಭಾಗವಹಿಸಲು ಆರ್. ರಜನೀಕಾಂತ, ಸಹಾಯಕ ಕೃಷಿ ನಿರ್ದೇಶಕರು, ಜಿಲ್ಲಾ ಕೃಷಿ ತರಬೇತಿ ಕೇಂದ್ರ, ಬಬ್ಬೂರು ಫಾರಂ (8277931058), ಎಂ.ಉಷಾರಾಣಿ, ಸಹಾಯಕ ಕೃಷಿ ನಿರ್ದೇಶಕರು (ರೈ.ಮ) 9980730696, ಟಿ.ಪಿ.ರಂಜಿತಾ, ಕೃಷಿ ಅಧಿಕಾರಿ (8277930959), ಸಿಕಂದರ್ ಬಾಷಾ, ಕೃಷಿ ಅಧಿಕಾರಿ (8277931058) ಮತ್ತು ಪವಿತ್ರಾ ಎಂ. ಜೆ. (9535412286) ಅವರ ದೂರವಾಣಿ ಸಂಖ್ಯೆಗೆ ಕರೆ ಮಾಡಿ ನೋಂದಾಯಿಸಿ ತರಬೇತಿಯ ಸದುಪಯೋಗ ಪಡೆದುಕೊಳ್ಳಲು ಕೋರಿದೆ. ಮೊದಲು ನೋಂದಾವಣಿ ಮಾಡಿಕೊಂಡ 50 ಜನ ರೈತಭಾಂದವರಿಗೆ ಆದ್ಯತೆ ಮೇರೆಗೆ ತರಬೇತಿಗೆ ಪರಿಗಣಿಸಲಾಗುವುದು.

### ಮಹಿಳಾ ಸಾಧಕರಿಗೆ ಸನ್ಮಾನ ಸಮಾರಂಭ

» ಚಿತ್ರದುರ್ಗ

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ವಕೀಲರ ಸಂಘ, ಶ್ರೀ ಬಸವೇಶ್ವರ ವಿದ್ಯಾಸಂಸ್ಥೆ, ರೈನ್ ಟ್ರಸ್ಟ್, ಸ್ವಯಂ ಸೇವಾ ಸಂಸ್ಥೆ ಮತ್ತು ವಿವಿಧ ಮಹಿಳಾ ಸ್ವ-ಸಹಾಯ ಸಂಘಗಳ ಸಂಯುಕ್ತಾಶ್ರಯದಲ್ಲಿ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಮತ್ತು ಮಹಿಳಾ ಸಾಧಕರಿಗೆ ಸನ್ಮಾನ ಸಮಾರಂಭವನ್ನು ಇದೇ ಮಾರ್ಚ್ 10ರಂದು ಬೆಳಿಗ್ಗೆ 10 ಗಂಟೆಗೆ ಚಿತ್ರದುರ್ಗ ನಗರದ ಮಠದ ಕುರುಬರಹಟ್ಟಿಯ ಬಸವೇಶ್ವರ ವಿದ್ಯಾಸಂಸ್ಥೆ ಆವರಣದಲ್ಲಿ ಆಯೋಜಿಸಲಾಗಿದೆ.

### ಜನತಾ ದರ್ಶನ 11ಕ್ಕೆ ಮುಂದೂಡಿಕೆ

» ಚಿತ್ರದುರ್ಗ

ಹಿರಿಯೂರು ತಾಲ್ಲೂಕಿನ ಜವನಗೊಂಡನಹಳ್ಳಿ ಗ್ರಾಮದ ನಾಡಕಚೇರಿ ಹತ್ತಿರದ ಗಣೇಶ ದೇವಸ್ಥಾನದ ಆವರಣದಲ್ಲಿ ಮಾರ್ಚ್ 9ರಂದು ಆಯೋಜಿಸಲಾಗಿದ್ದ ಜಿಲ್ಲಾಮಟ್ಟದ ಜನತಾ ದರ್ಶನ ಕಾರ್ಯಕ್ರಮವನ್ನು ಜಿಲ್ಲಾ ಉಸ್ತುವಾರಿ ಸಚಿವರ ಮೌಖಿಕ ಆದೇಶದ ಮೇರೆಗೆ ಕಾರ್ಯಕ್ರಮವನ್ನು ಮಾರ್ಚ್ 11ಕ್ಕೆ ಮುಂದೂಡಲಾಗಿದೆ. ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ.

## ಲೋಕಸಭೆ ಸಾರ್ವತ್ರಿಕ ಚುನಾವಣೆ 2024

# ಚುನಾವಣೆ ಸಿದ್ಧತಾ ಕಾರ್ಯಗಳ ಬಗ್ಗೆ ನಿಗಾ ಇರಿಸಲು ತಹಸಿಲ್ದಾರರಿಗೆ ಡಿಸಿ ವೆಂಕಟೇಶ್ ಸೂಚನೆ

» ಚಿತ್ರದುರ್ಗ

ಲೋಕಸಭೆ ಸಾರ್ವತ್ರಿಕ ಚುನಾವಣೆಗೆ ಶೀಘ್ರದಲ್ಲೇ ವೇಳಾಪಟ್ಟಿ ಪ್ರಕಟಗೊಳ್ಳಲಿದ್ದು, ಚುನಾವಣೆ ಘೋಷಣೆಯಾದ ತಕ್ಷಣದಿಂದಲೇ ನೀತಿಸಂಹಿತೆ ಜಾರಿಗೆ ಬರುತ್ತದೆ. ಹೀಗಾಗಿ ಚುನಾವಣೆಗಾಗಿ ಕೈಗೊಳ್ಳಲಾಗುವ ಎಲ್ಲ ಕಾರ್ಯಗಳ ಸಿದ್ಧತೆಗಳನ್ನು ಖುದ್ದಾಗಿ ಪರಿಶೀಲಿಸುವಂತೆ ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಅವರು ತಹಸಿಲ್ದಾರರಿಗೆ ಸೂಚನೆ ನೀಡಿದರು.

ಲೋಕಸಭೆ ಚುನಾವಣೆ ಸಂಬಂಧ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ತಹಸಿಲ್ದಾರರೊಂದಿಗೆ ನಡೆಸಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಲೋಕಸಭೆ ಚುನಾವಣೆಗೆ ಭಾರತ ಚುನಾವಣಾ ಆಯೋಗವು ಶೀಘ್ರದಲ್ಲಿಯೇ ವೇಳಾಪಟ್ಟಿ ಪ್ರಕಟಿಸಲಿದ್ದು, ಚುನಾವಣೆ ಘೋಷಣೆಯಾದ ತಕ್ಷಣದಿಂದಲೇ ಮಾದರಿ ನೀತಿ ಸಂಹಿತೆ ಜಾರಿಗೆ ಬರುತ್ತದೆ. ಹೀಗಾಗಿ ಎಲ್ಲ ಸಿದ್ಧತೆಗಳನ್ನು ತ್ವರಿತವಾಗಿ ಕೈಗೊಳ್ಳಬೇಕು. ಲೋಕಸಭೆ ಚುನಾವಣೆಯನ್ನು ಮುಕ್ತ ಹಾಗೂ ನ್ಯಾಯ ಸಮ್ಮತವಾಗಿ ನಡೆಸುವ ನಿಟ್ಟಿನಲ್ಲಿ ಜಿಲ್ಲೆಯ ಎಲ್ಲ ತಹಸಿಲ್ದಾರರ ಪಾತ್ರ ಅತಿ ಮುಖ್ಯವಾಗಿದೆ. ಕ್ಷೇತ್ರದಲ್ಲಿ ಮಾದರಿ ನೀತಿ ಸಂಹಿತೆ ಪಾಲನೆ ಕುರಿತಂತೆಯೂ ತಹಸಿಲ್ದಾರರ ಪಾತ್ರ ಅತ್ಯಂತ ಪ್ರಮುಖವಾಗಿದೆ ಎಂದು ಹೇಳಿದರು.



ಚುನಾವಣೆಗೆ ನೀತಿ ಸಂಹಿತೆ ಜಾರಿಯಾದ ಕೂಡಲೆ 24 ಗಂಟೆಗಳ ಒಳಗಾಗಿ ಎಲ್ಲ ಫ್ಲೆಕ್ಸ್‌ಗಳು, ಗೋಡೆ ಬರಹಗಳು, ಸರ್ಕಾರಿ ಜಾಹೀರಾತುಗಳನ್ನು ತೆರವುಗೊಳಿಸಬೇಕಾಗುತ್ತದೆ. ಈ ನಿಟ್ಟಿನಲ್ಲಿ ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾರಿಗಳು, ಪೌರಾಯುಕ್ತರೊಂದಿಗೆ ಸಮನ್ವಯ ಮಾಡಿಕೊಂಡು, ತೆರವುಗೊಳಿಸುವುದನ್ನು ಖಚಿತಪಡಿಸಿಕೊಳ್ಳಬೇಕಾಗುತ್ತದೆ ಎಂದು ಸೂಚನೆ ನೀಡಿದರು.

ಚುನಾವಣೆಗಾಗಿ ಈಗಾಗಲೆ ನಿಗದಿಪಡಿಸಲಾಗಿರುವ ಮತಗಟ್ಟೆಗಳಿಗೆ ಖುದ್ದು ತಹಸಿಲ್ದಾರರು ಭೇಟಿ ನೀಡಿ, ವಿಕಲಚೇತನರಿಗಾಗಿ ರ್‍ಯಾಂಪ್ ವ್ಯವಸ್ಥೆ ಇರುವುದನ್ನು ಖಚಿತಪಡಿಸಿಕೊಳ್ಳಬೇಕು, ಇಲ್ಲದಿದ್ದಲ್ಲಿ, ಸಂಬಂಧಪಟ್ಟ ಅಧಿಕಾರಿಗಳಿಗೆ ಮಾಹಿತಿ ನೀಡಿ, ಸಿದ್ಧಪಡಿಸಬೇಕು. ಅದೇ ರೀತಿ ಮತಗಟ್ಟೆಗಳಿಗೆ ಶೌಚಾಲಯ, ವಿದ್ಯುತ್ ಸಂಪರ್ಕ ಸೇರಿದಂತೆ ಮೂಲಭೂತ ಸೌಕರ್ಯಗಳು ಇರುವಂತೆ ನೋಡಿಕೊಳ್ಳಬೇಕು, ಹಾಗೂ ಈ ಕುರಿತು ವರದಿ ಸಲ್ಲಿಸಬೇಕು ಎಂದು ಸೂಚನೆ ನೀಡಿದರು.

ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿನ ಮತಗಟ್ಟೆಗಳ ವ್ಯಾಪ್ತಿಯಲ್ಲಿ ನೆಟ್‌ವರ್ಕ್ ತೊಂದರೆ ಇರುವುದನ್ನು ಗಮನಿಸಲಾಗಿದ್ದು, ಈ ಕುರಿತು ಎಲ್ಲ ಟೆಲಿಕಾಂ ಕಂಪನಿಗಳ ಪ್ರತಿನಿಧಿಗಳೊಂದಿಗೆ ಇತ್ತೀಚೆಗೆ ಸಭೆ ನಡೆಸಿ, ನೆಟ್‌ವರ್ಕ್ ವ್ಯವಸ್ಥೆ ಸಮರ್ಪಕವಾಗಿ ಒದಗಿಸಲು ಸೂಚನೆ ನೀಡಲಾಗಿತ್ತು. ಮೊಳಕಾಲ್ಮೂರು, ಚಳ್ಳಕೆರೆ, ಹಿರಿಯೂರು ತಾಲ್ಲೂಕುಗಳಲ್ಲಿನ ಕೆಲವು ಮತಗಟ್ಟೆಗಳ ವ್ಯಾಪ್ತಿಯಲ್ಲಿ ನೆಟ್‌ವರ್ಕ್ ತೊಂದರೆ ಇದೆ, ಇದರಿಂದಾಗಿ ಚುನಾವಣಾ ಕಾರ್ಯಕ್ಕೆ ತೊಂದರೆ ಉಂಟಾಗಲಿದ್ದು, ಕೂಡಲೆ ತಹಸಿಲ್ದಾರರು ಟೆಲಿಕಾಂ ಕಂಪನಿಗಳೊಂದಿಗೆ ಸಮನ್ವಯ ಮಾಡಿಕೊಂಡು, ನೆಟ್‌ವರ್ಕ್ ಸಮರ್ಪಕಗೊಳಿಸಿದ್ದಾರೆಯೇ ಎಂಬುದನ್ನು ಪರಿಶೀಲಿಸಿ, ವರದಿ ನೀಡಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಚುನಾವಣೆಗಾಗಿ ಈಗಾಗಲೆ ಮತಗಟ್ಟೆ ಅಧಿಕಾರಿ, ಸಿಬ್ಬಂದಿಗಳ ನೇಮಕ ಪ್ರಕ್ರಿಯೆ ಅಂತಿಮ ಹಂತದಲ್ಲಿದ್ದು, ಅಧಿಕಾರಿ, ಸಿಬ್ಬಂದಿಗಳಿಗೆ ತರಬೇತಿಯನ್ನು ನೀಡಬೇಕಿರುತ್ತದೆ. ಹೀಗಾಗಿ ಚುನಾವಣೆ ಕಾರ್ಯಕ್ಕೆ ನಿಯುಕ್ತಿಗೊಳ್ಳುವ ಅಧಿಕಾರಿ, ಸಿಬ್ಬಂದಿಗಳಿಗೆ ಸೂಕ್ತ ತರಬೇತಿಗಾಗಿ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಸೂಚನೆ ನೀಡಿದರು.

ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ ಅವರು ಮಾತನಾಡಿ, ಚುನಾವಣಾ ಅಕ್ರಮ ಚಟುವಟಿಕೆಗಳನ್ನು ತಡೆಗಟ್ಟುವಸಲುವಾಗಿ ಚೆಕ್‌ಪೋಸ್ಟ್‌ಗಳನ್ನು ಸ್ಥಾಪಿಸಲಾಗುವ ಸ್ಥಳಗಳನ್ನು ಈಗಾಗಲೆ ಗುರುತಿಸಲಾಗಿದೆ. ಅಲ್ಲದೆ ಚೆಕ್‌ಪೋಸ್ಟ್‌ಗಳ ನಿರ್ಮಾಣ ಸಂಬಂಧ ಟೆಂಡರ್ ಪ್ರಕ್ರಿಯೆಯನ್ನು ಕೂಡ ಕೈಗೊಳ್ಳಲಾಗಿದೆ. ಚುನಾವಣಾ ನೀತಿ ಸಂಹಿತೆ ಜಾರಿಯಾದ ಕೂಡಲೆ ಜಿಲ್ಲೆಯಲ್ಲಿ ಈಗಾಗಲೆ ಗುರುತಿಸಲಾಗಿರುವ ಚೆಕ್‌ಪೋಸ್ಟ್‌ಗಳು ಕಾರ್ಯಾರಂಭ ಮಾಡಬೇಕಾಗುತ್ತದೆ. ಹೀಗಾಗಿ ತಹಸಿಲ್ದಾರರು, ಚೆಕ್‌ಪೋಸ್ಟ್ ಸ್ಥಾಪಿಸಲಾಗುವ ಸ್ಥಳಗಳಿಗೆ ಭೇಟಿ ನೀಡಿ, ಒದಗಿಸಬಹುದಾದ ಸೌಲಭ್ಯಗಳ ಬಗ್ಗೆ ಹಾಗೂ ಚೆಕ್‌ಪೋಸ್ಟ್ ನಿರ್ಮಾಣಕ್ಕೆ ಸಂಬಂಧಿಸಿದ ಕೆಲಸಗಳನ್ನು ಪರಿಶೀಲಿಸಿ, ಖಚಿತಪಡಿಸಿಕೊಳ್ಳಬೇಕು ಎಂದು ಸೂಚನೆ ನೀಡಿದರು.

ಸಭೆಯಲ್ಲಿ ಉಪವಿಭಾಗಾದಿಕಾರಿ ಕಾರ್ತಿಕ್, ಜಿಲ್ಲಾ ಎನ್.ಐ.ಸಿ. ಅಧಿಕಾರಿ ಕೆ. ಶಾಸ್ತ್ರಿ, ಸೇರಿದಂತೆ ಜಿಲ್ಲೆಯ ಎಲ್ಲ ತಹಸಿಲ್ದಾರರು, ಚುನಾವಣೆ ಶಾಖೆಯ ಎಲ್ಲ ಅಧಿಕಾರಿ, ಸಿಬ್ಬಂದಿ ಪಾಲ್ಗೊಂಡಿದ್ದರು.

# ಕಸಾಪ ರಾಜ್ಯಪರಿಷತ್ ಸಭೆ ಮಲ್ಲಾಡಿಹಳ್ಳಿಯಲ್ಲಿ: ಅಜೀವ ಸದಸ್ಯರಿಗೂ ಆಹ್ವಾನ: ವೀರಭದ್ರಸ್ವಾಮಿ

» ಚಳ್ಳಕೆರೆ

ಕನ್ನಡ ಸಾಹಿತ್ಯ ಪರಿಷತ್‌ನ ರಾಜ್ಯಪರಿಷತ್ ಸರ್ವಸದಸ್ಯರ ಸಭೆ ರಾಜ್ಯಘಟಕದ ಅಧ್ಯಕ್ಷರಾದ ಮನೋಹರ್‌ಜೋಶಿ ಅಧ್ಯಕ್ಷತೆಯಲ್ಲಿ ಮಾರ್ಚ್ 10ರ ಭಾನುವಾರ ಬೆಳಗ್ಗೆ 11ಕ್ಕೆ ಮಲ್ಲಾಡಿಹಳ್ಳಿಯ ಶ್ರೀರಾಘವೇಂದ್ರಗುರುಗಳ ಅನಾಥಾಶ್ರಮದ ಸಭಾಂಗಣದಲ್ಲಿ ನಡೆಯಲಿದ್ದು, ತಾಲ್ಲೂಕಿನ ಸಾಹಿತ್ಯ ಪರಿಷತ್‌ನ ಅಜೀವಸದಸ್ಯರು ಸಭೆಯಲ್ಲಿ ಭಾಗವಹಿಸಲು ಅವಕಾಶ ನೀಡಲಾಗಿದೆ ಎಂದು ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಜಿ.ಟಿ.ವೀರಭದ್ರಸ್ವಾಮಿ ತಿಳಿಸಿದರು.

ಪ್ರವಾಸಿಮಂದಿರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಇದೇ ಮೊದಲ ಬಾರಿಗೆ ಚಿತ್ರದುರ್ಗ ಜಿಲ್ಲೆಯಲ್ಲಿ ಕನ್ನಡ ಸಾಹಿತ್ಯ ಪರಿಷತ್‌ನ ರಾಜ್ಯ ಸರ್ವಸದಸ್ಯರಸಭೆ ಹಮ್ಮಿಕೊಂಡಿರುವುದು ಸಂತಸ ತಂದಿದೆ. ಜಿಲ್ಲಾಧ್ಯಕ್ಷ ಕೆ.ಎಂ.ಶಿವಸ್ವಾಮಿ ಮಾರ್ಗದರ್ಶನದಲ್ಲಿ ಸರ್ವಸದಸ್ಯರ ಸಭೆ ಯಶಸ್ವಿಗೊಳಿಸಲು ಈಗಾಗಲೇ ಅಗತ್ಯಕ್ರಮ ಕೈಗೊಂಡಿದೆ. ಅಜೀವಸದಸ್ಯರು ಸರ್ವಸದಸ್ಯರ ಸಭೆಯಲ್ಲಿ ಭಾಗವಹಿಸಲು ಕನ್ನಡ ಸಾಹಿತ್ಯ ಪರಿಷತ್‌ನಿಂದ ವ್ಯವಸ್ಥೆ ಕಲ್ಪಿಸಲಾಗುವುದು. ಆಸಕ್ತರು ಹೆಚ್ಚಿನ ಮಾಹಿತಿಗೆ 80503 11363 ಸಂಪರ್ಕಿಸಲು ಮನವಿ ಮಾಡಿದರು.

ಸಾಹಿತ್ ಪರಿಷತ್ ತಾಲ್ಲೂಕು ಕಾರ್ಯದರ್ಶಿ ಡಿ.ಈರಣ್ಣ, ಹೋಬಳಿ ಅಧ್ಯಕ್ಷ ಡಿ.ದಯಾನಂದ, ಸದಸ್ಯ ಎಚ್.ಸಿ.ಶಿವಮೂರ್ತಿ ಉಪಸ್ಥಿತರಿದ್ದರು.



### ಅನುದಾನಿತ ನೌಕರರಿಂದ ಶಾಸಕರಿಗೆ ಸನ್ಮಾನ

ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕ ನಿಗದಮ ಅಧ್ಯಕ್ಷರಾಗಿ ಮಾ.4ರಂದು ಅಧಿಕಾರ ಸ್ವೀಕರಿಸಿದ ಕ್ಷೇತ್ರದ ಶಾಸಕ ಟಿ.ರಘುಮೂರ್ತಿಯವರಿಗೆ ತಾಲ್ಲೂಕು ಅನುದಾನಿತ ಶಾಲೆಗಳ ನೌಕರರ ಸಂಘದ ವತಿಯಿಂದ ಮಾರ್ಚ್‌9ರ ಶನಿವಾರ ಬೆಳಗ್ಗೆ 11ಕ್ಕೆ ರೋಟರಿ ಬಾಲಭವನದಲ್ಲಿ ಸನ್ಮಾನಿಸಲಾಗುವುದು.

» ಜಿ.ಟಿ.ವೀರಭದ್ರಸ್ವಾಮಿ ಅಧ್ಯಕ್ಷ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್



ಹಿರಿಯೂರು ನಗರದ ಪೊಲೀಸ್ ಕ್ವಾಟ್ರಸ್ ಆವರಣದಲ್ಲಿರುವ ಶಿವಾಲಯದಲ್ಲಿ ಮಹಾಶಿವರಾತ್ರಿ ಅಂಗವಾಗಿ ವಿಶೇಷ ಪೂಜೆ ನಡೆಯಿತು ಈಶ್ವರನಿಗೆ ಹೂವಿನ ಅಲಂಕಾರ ಮಾಡಲಾಗಿತ್ತು

# ಮತಿಘಟ್ಟದಿಂದ ಚಿತ್ರದುರ್ಗದ ಬಾರ್ಡ್‌ರ್ ರಸ್ತೆವರೆಗೂ ಕಾಂಕ್ರಿಟ್ ರಸ್ತೆ ಕಾಮಗಾರಿಗೆ ಚಂದ್ರಪ್ಪ ಪೂಜೆ



» ಹೊಳಲ್ಕೆರೆ

ಬರಗಾಲ ಬಂದಿದೆ. ರೈತರ ಕಷ್ಟ-ಸುಖ ಏನೆಂಬುದನ್ನು ತಿಳಿದುಕೊಂಡು ಬದ್ದತೆಯಿಂದ ಕೆಲಸ ಮಾಡುತ್ತಿದ್ದೇನೆ. ಯಾರನ್ನೂ ಮೆಚ್ಚಿಸಲು ರಾಜಕಾರಣಕ್ಕೆ ಬಂದಿಲ್ಲ ಎಂದು ಹೊಳಲ್ಕೆರೆ ಶಾಸಕ ಡಾ.ಎಂ. ಚಂದ್ರಪ್ಪ ಹೇಳಿದರು.

ತಾಲ್ಲೂಕಿನ ರಾಮೇನಹಳ್ಳಿ ಗ್ರಾಮದಲ್ಲಿ ಮತಿಘಟ್ಟದಿಂದ ಚಿತ್ರದುರ್ಗ ಬಾರ್ಡ್‌ರ್ ರಸ್ತೆವರೆಗೂ 31.14 ಕೋಟಿ ರೂ. ವೆಚ್ಚದಲ್ಲಿ ನೂತನ ಕಾಂಕ್ರಿಟ್ ರಸ್ತೆ ಕಾಮಗಾರಿಗೆ ಶುಕ್ರವಾರ ಪೂಜೆ ನೆರವೇರಿಸಿ ಮಾತನಾಡಿದರು.

ಇನ್ನುನೂರುವರ್ಷಗಳಾದರೂ ಹಾಳಾಗದೆಗಟ್ಟಿಮುಟ್ಟಾಗಿರುವಂತೆ ಈ ರಸ್ತೆಯನ್ನು ನಿರ್ಮಾಣ ಮಾಡಲಾಗುತ್ತದೆ. ರಸ್ತೆ ಆಗುವುದಕ್ಕಿಂತ ಮುಂಚೆಯೇ ರೈತರು ತಮ್ಮ ಹೊಲ ಹಾಗೂ ತೋಟಗಳಿಗೆ ಪೈಪ್‌ಗಳನ್ನು ಹಾಕಿಕೊಳ್ಳುವುದು ಉತ್ತಮ. 450 ಕೋಟಿ ರೂ.ಗಳನ್ನು ಖರ್ಚು ಮಾಡಿ ಹಿರಿಯೂರಿನ ವಾಣಿವಿಲಾಸ ಸಾಗರದಿಂದ ನೀರು ತಂದು ತಾಲ್ಲೂಕಿನ ಎಲ್ಲಾ ಹಳ್ಳಿಗಳಲ್ಲಿ ಮನೆ ಮನೆಗೆ ಕುಡಿಯುವ ನೀರು ಪೂರೈಸಲಾಗುವುದು. ನಾನು ಶಾಸಕನಾಗಿ ಬಂದ ಮೇಲೆ ಇಲ್ಲಿ ಮಣ್ಣಿನ ರಸ್ತೆಯಿತ್ತು. ಯಾರಿಂದ ಏನನ್ನು ಹೇಳಿಸಿಕೊಳ್ಳದೆ ಎಲ್ಲಿ ಯಾವ ಕೆಲಸವಾಗಬೇಕೆನ್ನುವುದನ್ನು ಕಣ್ಣಾರೆ ಕಂಡು ಕ್ಷೇತ್ರದ ಅಭಿವೃದ್ದಿಗೆ ಪ್ರಾಮಾಣಿಕವಾಗಿ ದುಡಿಯುತ್ತಿದ್ದೇನೆ ಎಂದರು. ರಾಜ್ಯದಲ್ಲಿಕಾಂಗ್ರೆಸ್‌ಸರ್ಕಾರವಿದೆ. ನಿಮ್ಮೆಲ್ಲರ ಆಶೀರ್ವಾದದಿಂದ 30 ವರ್ಷದ ಕೆಳಗೆ ಶಾಸಕನಾಗಿದ್ದೇನೆ. ವಿಧಾನಸೌಧವನ್ನು 85 ಲಕ್ಷ ರೂ. ಗಳಲ್ಲಿ ಕಟ್ಟಲಾಗಿದೆ.

## ಪ್ರಮುಖ ಸುದ್ದಿ

# ಸಾಸಲು ಸರ್ಕಲ್‌ನಿಂದ ಹಿರೇಬೆನ್ನೂರುವರೆಗೆ 34.25 ಕೋಟಿ ರೂ. ವೆಚ್ಚದ ಕಾಂಕ್ರಿಟ್ ರಸ್ತೆ ಕಾಮಗಾರಿಗೆ ಶಾಸಕ ಡಾ.ಎಂ.ಚಂದ್ರಪ್ಪ ಪೂಜೆ

» ಹೊಳಲ್ಕೆರೆ

ಗಾಂಧಿಜಯಂತಿಯಂದು ಎಲ್ಲಾ ಕೆರೆಗಳಿಗೆ ನೀರು ತುಂಬಿಸಲಾಗುವುದೆಂದು ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪ ತಿಳಿಸಿದರು.

ಹೊಳಲ್ಕೆರೆ ತಾಲ್ಲೂಕಿನ ಸಾಸಲು ಸರ್ಕಲ್‌ನಿಂದಹಿರೇಬೆನ್ನೂರುವರೆಗೆ34.25 ಕೋಟಿ ರೂ.ವೆಚ್ಚದಲ್ಲಿ ನೂತನ ಕಾಂಕ್ರಿಟ್ ರಸ್ತೆ ಕಾಮಗಾರಿಗೆ ಶುಕ್ರವಾರ ಭೂಮಿ ಪೂಜೆ ನೆರವೇರಿಸಿ ಮಾತನಾಡಿದರು.

ಗಟ್ಟಿಮುಟ್ಟಾದ ಸಿ.ಸಿ. ರಸ್ತೆ ಆದ ಮೇಲೆ ರೈತರು ತಮ್ಮ ಹೊಲ ಹಾಗೂ ತೋಟಗಳಿಗೆ ಪೈಪ್‌ಲೈನ್ ಹಾಕಿಕೊಳ್ಳಬೇಡಿ. ಡಾ.ಶಿವಮೂರ್ತಿ ಶಿವಾಚಾರ್ಯ ಮಹಾಸ್ವಾಮಿಗಳ ಒತ್ತಾಯದಂತೆ ಸಾಸ್ವೆಹಳ್ಳಿ ಏತ ನೀರಾವರಿ ಯೋಜನೆಯಾಗುತ್ತಿದೆ. ಡಿಸೆಂಬರ್‌ನೊಳಗೆ ಎಲ್ಲಾ ಕೆರೆಗಳಿಗೆ ನೀರು ಹರಿಸಲಾಗುವುದು. ಚಿಕ್ಕಜಾಜೂರು, ತಾಳ್ಯ, ರಾಮಗಿರಿ, ಮಲ್ಲಾಡಿಹಳ್ಳಿ, ಹೊಳಲ್ಕೆರೆ ಕಸಬಾ ಭಾಗದಲ್ಲಿ ಸಮಸ್ಯೆಯಿರುವುದರಿಂದ ಒಂದು ಮುಕ್ಕಾಲು ಕಿ.ಮೀ. ಪೈಪ್‌ಲೈನ್ ತೆಗೆಯಲು ಬಿಟ್ಟಿರಲಿಲ್ಲ. ರಾಜ್ಯದ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್‌ರವರು ರೈತರು ಹಾಗೂ ರಾಜಕಾರಣಿಗಳ ಜೊತೆ ಮಾತುಕತೆ ನಡೆಸಿದ್ದರಿಂದ ಪೊಲೀಸ್ ಬಂದೋಬಸ್ತ್ ನಡುವೆ ಸಮರೋಪಾದಿಯಲ್ಲಿ ಕೆಲಸ ನಡೆಯುತ್ತಿದೆ ಎಂದು ಹೇಳಿದರು.



ನಾಲ್ಕು ವರ್ಷ ಹನ್ನೊಂದು ತಿಂಗಳು ನಾನು ರಾಜಕೀಯ ಮಾಡಲ್ಲ. ಎಲ್ಲಾ ಪಕ್ಷದವರ ವಿಶ್ವಾಸ ಪಡೆದು ಕ್ಷೇತ್ರದ ಜನರಿಗೆ ಅನುಕೂಲವಾಗುವಂತ ಕೆಲಸ ಮಾಡುತ್ತಿದ್ದೇನೆ. ಚುನಾವಣೆ ಸಂದರ್ಭದಲ್ಲಿ ಕೇವಲ ಒಂದು ತಿಂಗಳು ಮಾತ್ರ ನಾನು ರಾಜಕೀಯ ಮಾಡುತ್ತೇನೆ. ಅಧಿಕಾರ ಶಾಶ್ವತವಲ್ಲ. ಇರುವಷ್ಟು ದಿನ ಹತ್ತಾರು ಜನ ಮೆಚ್ಚುವ ರೀತಿ ಕೆಲಸ ಮಾಡುವ ಜಾಯಮಾನ ನನ್ನದು. 1994 ರಲ್ಲಿ ಮೊದಲ ಬಾರಿಗೆ ಭರಮಸಾಗರದಿಂದ ಸ್ಪರ್ಧಿಸಿ ಶಾಸಕನಾಗಿದ್ದೆ. ಒಂದು ಬಾರಿ ಗೆದ್ದವರು ಎರಡನೆ ಬಾರಿಗೆ ಭರಮಸಾಗರದಲ್ಲಿ ಗೆಲ್ಲುವುದಿಲ್ಲಎನ್ನುವಮೂಢನಂಬಿಕೆಯಿತ್ತು. ಆದರೆ ಎರಡನೆ ಬಾರಿಗೆ ಸ್ಪರ್ಧಿಸಿದಾಗಲೂ ಭರಮಸಾಗರ ಕ್ಷೇತ್ರದ ಜನ ಮತ ನೀಡಿ ನನ್ನನ್ನು ಗೆಲ್ಲಿಸಿದರು. ನೂರಾರು ಕೋಟಿ ರೂ.ಗಳನ್ನು ಖರ್ಚು ಮಾಡಿದ್ದೇನೆ. ಚಿಕ್ಕಜಾಜೂರು ಬಳಿ ಹನ್ನೆರಡು ಕೋಟಿ ರೂ.ವೆಚ್ಚದಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಕಟ್ಟಿಸಲಾಗುತ್ತಿದೆ. ಡಾಕ್ಟರ್‌ಗಳು ಇಲ್ಲಿಯೇ ಉಳಿದುಕೊಳ್ಳಲಿ ಎನ್ನುವ ಉದ್ದೇಶದಿಂದ ಎರಡು ಕೋಟಿ ರೂ.ವೆಚ್ಚದಲ್ಲಿ ಕ್ವಾರ್ಟಸ್‌ಗಳನ್ನು ಕಟ್ಟಲಾಗುವುದೆಂದರು.

## ಫಾಸ್ಟ್ ನ್ಯೂಸ್

### ಮಾನವನ ಮನಸ್ಸಿನ ಕತ್ತಲೆ ಕಳೆಯಲು ಗುರುವಿನ ಅಗತ್ಯ: ಸ್ವಾಮೀಜಿ



» **ಚಿತ್ರದುರ್ಗ**

ಮನೆಯಲ್ಲಿನ ಕತ್ತಕಲೆಯನ್ನು ಕಳೆಯಲು ದೀಪದ ಅವಶ್ಯಕತೆ ಇದೆ, ಅದೇ ರೀತಿ ಮಾನವನ ಮನಸ್ಸಿನ ಕತ್ತಲೆಯನ್ನು ಕಳೆಯಲು ಗುರುವಿನ ಅಗತ್ಯ ಇದೆ ಎಂದು ಶ್ರೀ ಸದ್ಗುರು ಕಬೀರಾನಂದಾಶ್ರಮದ ಪೀಠಾಧ್ಯಕ್ಷರಾದ ಶ್ರೀ ಶಿವಲಿಂಗಾನಂದ ಶ್ರೀಗಳು ತಿಳಿಸಿದರು. ನಗರದ ಶ್ರೀ ಕಬೀರಾನಂದಾಶ್ರಮದವತಿಯಿಂದ ಶ್ರೀಮಠದ ಆವರಣದಲ್ಲಿ ನಿರ್ಮಿತವಾಗಿರುವ ಶ್ರೀ ಸದ್ಗುರು ಕಬೀರಾನಂದಸ್ವಾಮಿ ಮಹಾ ಮಂಟಪದಲ್ಲಿ ನಡೆಯುತ್ತಿರುವ 94ನೇ ಮಹಾ ಶಿವರಾತ್ರಿ ಮಹೋತ್ಸವದ ನಾಲ್ಕನೇ ದಿನದಂದು ನಡೆದ ಕಾರ್ಯಕ್ರಮದಲ್ಲಿ ಸಾನಿಧ್ಯವಹಿಸಿ ಮಾತನಾಡಿದ ಶ್ರೀಗಳು, ಕಲಿಯುತ್ತಿರುವವರು ಜ್ಞಾನ ಇಲ್ಲವಾದರೆ ಕಲಿತ್ತಿದ್ದು ಸಹಾ ವ್ಯರ್ಥವಾಗುತ್ತದೆ. ಮಾನವನಾದವನು ಆತ್ಮಜ್ಞಾನವನ್ನು ಹೊಂದಬೇಕಿದೆ. ಲೌಕಿಕವಾಗಿ ವಿದ್ಯೆಯನ್ನು ಕಲಿತ್ತಿದ್ದರು ಸಹಾ ಶುಭವಾಗುವುದಿಲ್ಲ. ಗುರುಗಳು ಹೇಳಿದ ಮಾತುಗಳ ಮಾನವನಿಗೆ ದಾರಿದೀಪವಾಗಬೇಕಿದೆ. ಆಗ ಮಾತ್ರ ಮಾನವ ತನ್ನ ಪ್ರಗತಿಯನ್ನು ಹೊಂದಲು ಸಾಧ್ಯವಿದೆ ಎಂದರು.ಚಿಕ್ಕಬಳಾಪುರದ ಶ್ರೀ ಮಂಗಳನಾಥ್ ಶ್ರೀಗಳು ಮಾತನಾಡಿ, ಮಾನವ ಜನ್ಮ ದೊರಕಿದ ಮೇಲೆ ಅದನ್ನು ಪ್ರಯೋಜನ ಮಾಡಿಕೊಳ್ಳಬೇಕಿದೆ, ಪರಮಾತ್ಮನನ್ನು ಧ್ಯಾನಿಸುವುದರ ಮೂಲಕ ಮುಕ್ತಿ, ಮೋಕ್ಷವನ್ನು ಪಡೆಯಬೇಕಿದೆ. ಶರೀರವನ್ನು ಪ್ರಪಂಚದ ಲೌಕಿಕ ಸುಖಗಳಿಗೆ ಮಾತ್ರವೇ ಉಪಯೋಗ ಮಾಡದೇ ಧರ್ಮ ಕಾರ್ಯಗಳಿಗೆ ಸಹಾ ಉಪಯೋಗವನ್ನು ಮಾಡಬೇಕಿದೆ. ಸತ್ ಜ್ಞಾನವನ್ನು ಮೈಗೂಡಿಸಿಕೊಳ್ಳಬೇಕಿದೆ. ಮಹಾಭಾರತ, ರಾಮಾಯಣ ಮತ್ತು ಭಗವದ್ಗಗೀತೆಯನ್ನು ಸಮಯ ಇದ್ದಾಗಲೇ ಓದಬೇಕು, ನಿವೃತ್ತಿಯಾದ ಮೇಲೆ ಓದುವುದು ಸರಿಯಲ್ಲ, ಪುಸ್ತಕವನ್ನು ಪೂಜೆ ಮಾಡುವುದರಿಂದ ನಮಗೆ ಜ್ಞಾನ ಬರುವುದಿಲ್ಲ ಅದರ ಬದಲಾಗಿ ದಿನ ಓದುವಂತ ಅಭ್ಯಾಸವನ್ನು ಬೆಳಸಿಕೊಳ್ಳಬೇಕಿದೆ. ಧರ್ಮ ಕಾರ್ಯವನ್ನು ಮಾಡುವುದರ ಮೂಲಕ ಮುಕ್ತಿಯನ್ನು ಕಾಣಬಹುದಾಗಿದೆ. ಲೌಕಿಕ ಪ್ರಪಂಚದಲ್ಲಿ ಸುಖಗಳು ಆನಂದವನ್ನು ನೀಡುತ್ತವೆ ಆದರೆ ಇದು ಕ್ಷಣಿಕ ಮಾತ್ರ, ಇಂತಹ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಸಕ್ರಿಯವಾಗಿ ಭಾಗವಹಿಸಬೇಕಿದೆ ಆಗ ಮಾತ್ರ ಸಂಸ್ಕಾರ ಬರಲು ಸಾಧ್ಯವಿದೆ ಎಂದರು. ಶೃಂಗೇರಿಯ ಶ್ರೀ ಆದಿಚುಂಚನಗಿರಿ ಶಾಖಾಮಠದ ಶ್ರೀ ಗುಣನಾಥ್ ಶ್ರೀಗಳು ಮಾತನಾಡಿ, ಜ್ಞಾನಕ್ಕಿಂತ ಮೀಗಿಲಾದದು ಯಾವುದು ಇಲ್ಲವಾಗಿದೆ. ಅಧಾತ್ಮಿಕ ಜ್ಞಾನವನ್ನು ಗುರಿವಿನ ಮೂಲಕ ಪಡೆಯಬೇಕಿದೆ. ಮೋಕ್ಷ ಮತ್ತು ಮುಕ್ತಿಯನ್ನು ಆತ್ಮಜ್ಞಾನ ಮಾತ್ರ ನೀಡುತ್ತದೆ. ಇದರ ಬಗ್ಗೆ ಚೀಮತನ ಮಂಥನ ಮಾಡಬೇಕಿದೆ. ಭಗವಂತ ಶಕ್ತಿಯನ್ನು ನೀಡಿದ್ದಾನೆ ಅದರ ಸದುಪಯೋಗವಾಗಬೇಕಿದೆ. ಮಾನವನಿಗೆ ಜ್ಞಾನದ ಅಶ್ಯಕತೆ ಇದೆ ಪ್ರಾಣೀಗಳಿಗಲ್ಲ, ಮೆನಯಲ್ಲಿ ಹಿರಿಯರ ಮಾತನ್ನು ಕೇಳಬೇಕಿದೆ. ಆದ್ವೈತ್ವ ಪರಂಪರೆಗೆ ಜಾತಿಯ ಸೂಂಕು ಇಲ್ಲವಾಗಿದೆ. ಅದು ಜಾತ್ಯಾತೀತ ಮಠವಾಗಿದೆ. ಅದು ಯಾವೂತ್ತು ಸಹಾ ಜಾತಿಯನ್ನು ಕೇಳುವುದಿಲ್ಲ ಎಂದರು.

ಕಾರ್ಯಕ್ರಮದ ಸಾನಿದ್ಯವನ್ನು ಹೊಸದುರ್ಗದ ಮದುರೆಯ ಬ್ರಹ್ಮವಿದ್ಯಾನಗರದ ಶಿಲಾಪುರಿ ಉಪ್ಪಾರ ಭಗೀರಥ ಮಹಾ ಸಂಸ್ಥಾನದ ಶ್ರೀ ಪುರುಷೋತ್ತಮಾನಂದಪುರಿ ಶ್ರೀಗಳು ಮಾತನಾಡಿ, ಜ್ಞಾನಕ್ಕಿಂತ ಮೀಗಿಲಾದದು ಯಾವುದು ಇಲ್ಲ, ಆತ್ಮಜ್ಞಾನ ಭಗವಂತ ಎನ್ನಲಾಗುತ್ತಿದೆ. ಮಾನವ ಜನ್ಮ ಪವಿತ್ರವಾದದು ಇದು ಸಿಗುವುದು ಬಹಳ ಪುಣ್ಯ ಸಿಕ್ಕ ಮೇಲೆ ಸಿಕ್ಕಾಗಿ ಸರಿಯಾದ ರೀತಿಯಲ್ಲಿ ಉಪಯೋಗ ಮಾಡಬೇಕಿದೆ. ಸಂಸ್ಕಾರವನ್ನು ಕಲಿಯುವುದರ ಮೂಲಕ ಸನ್ಮಾರ್ಗವನ್ನು ಪಡೆಯಬೇಕಿದೆ ಎಂದರು. 94ನೇ ಮಹಾ ಶಿವರಾತ್ರಿ ಸಪ್ತಾಹದ ಅಧ್ಯಕ್ಷರಾದ ಕೆ.ಸಿ.ನಾಗರಾಜು, ಬಿಜೆಪಿ ಜಿಲ್ಲಾ ಕಾರ್ಯದರ್ಶಿ ರೇಖಾ, ನಗರಾಭೀವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷರಾದ ತಿಪ್ಪೇಸ್ವಾಮಿ, ಕಾಂಗ್ರೆಸ್ ಮುಖಂಡರಾದ ಹೂದಿಗೆರೆ ರಮೇಶ್, ನಗರಸಭಾ ಸದಸ್ಯರಾದ ಶ್ರೀಮತಿ ಪೂಜಾ, ಮದಕರಿ ಗ್ರಾಮ ಪಂಚಾಯಿತಿ ಸದಸ್ಯ ರಂಜಿತ್, ಡಾ.ಶ್ರೀಧರ್ ಮೂರ್ತಿ, ವಿಜಯಕುಮಾರ್ ಸಿದ್ದವ್ವನಹಳ್ಳಿ ಪರಮೇಶ್ ಸೇರಿದಂತೆ ಇತರರು ಭಾಗವಹಿಸಿದ್ದರು.



# ಶ್ರೀ ಶಿವಲಿಂಗಾನಂದ ಶ್ರೀಗಳ ಪಲ್ಲಕ್ಕಿ ಉತ್ಸವ

» **ಚಿತ್ರದುರ್ಗ**

ಕಳೆದ 04 ರಿಂದ ನಗರದ ಕರುವಿನ ಕಟ್ಟೆ ವೃತ್ತದಲ್ಲಿನ ಶ್ರೀ ಸದ್ಗುರು ಕಬೀರಾನಂದಾಶ್ರಮದಲ್ಲಿ ನಡೆಯುತ್ತಿರುವ ಶಿವನಾಮ ಸಪ್ತಾಹದ 94ನೇ ಶಿವರಾತ್ರಿ ಮಹೋತ್ಸವ ಕಾರ್ಯಕ್ರಮದಡಿಯಲ್ಲಿ ಇಂದು ಶ್ರೀ ಶಿವಲಿಂಗಾನಂದ ಶ್ರೀಗಳ ಪಲ್ಲಕ್ಕಿ ಉತ್ಸವ ಹಾಗೂ ಜನಪದ ಉತ್ಸವ ನಡೆಯಿತು.

ಶ್ರೀ ಕಬೀರಾನಂದಸ್ವಾಮಿ ಕ್ರೀಡಾ ಮತ್ತು ಸಾಂಸ್ಕೃತಿಕ ಸಂಘ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಇವರ ಸಹಯೋಗದೊಂದಿಗೆ ಹಮ್ಮಿಕೊಂಡಿದ್ದ ಶ್ರೀಗಳ ಪಲ್ಲಕ್ಕಿ ಹಾಗೂ ಜಾನಪದ ಉತ್ಸವಕ್ಕೆ 94ನೇ ಮಹಾ ಶಿವರಾತ್ರಿ ಸಪ್ತಾಹದ ಅಧ್ಯಕ್ಷರಾದ ಕೆ.ಸಿ.ನಾಗರಾಜುರವರು ಚಾಲನೆಯನ್ನು ನೀಡಿದರು. ಈ ಸಂದರ್ಭದಲ್ಲಿ ಮುಖಂಡರಾದ ನಂದಿನಾಗರಾಜ್, ಪ್ರಶಾಂತ್, ನಾಗರಾಜ್ ಸಗಂ, ಸತೀಶ್, ಓಂಕಾರ್, ರುದ್ರೇಶ್ ಪ್ರಭಂಜನ್, ಪೈಲ್ವಾನ್ ತಿಪ್ಪೇಸ್ವಾಮಿ ನಿರಂಜನ ಮೂರ್ತಿ, ಶಾಸ್ತ್ರಿ, ತಿಪ್ಪೇಸ್ವಾಮಿ ಯೋಗಿಶ್ ಸೇರಿದಂತೆ ಇತರರು ಭಾಗವಹಿಸಿದ್ದರು.

ಈ ಉತ್ಸವದಲ್ಲಿ ಚಂಡೆ, ಕೀಲು ಕುದುರೆ, ತಮಟೆ, ಜಾಂಜ್ ನೃತ್ಯ, ಲಂಬಾಣಿ ನೃತ್ಯ, ಖಾಸಬೇಡರ ಪಡೆ, ಡೊಳ್ಳು ಕುಣಿತ, ಕೋಲಾಟ, ಭಜನೆ, ತಟ್ಟೆರಾಯ, ಶಾರದಾ ಬ್ರಾಸ್ ಬ್ಯಾಂಡ್, ಕಹಳೆ, ಉರಿಮೆ, ಗೂರವಪ್ಪ, ಛತ್ರಿ ಚಾಮರ ಸೇರಿದಂತೆ ವಿವಿಧ ಜಾನಪದ ಕಲಾ ತಂಡಗಳು ಈ ಉತ್ಸವದಲ್ಲಿ ಭಾಗವಹಿಸಿ ತಮ್ಮ ಪ್ರತಿಭೆಯನ್ನು ಪ್ರದರ್ಶನ ಮಾಡಿದರು.

ಇದರೊಂದಿಗೆ ಆದಿಚುಂಚನಗಿರಿ ಶಿಕ್ಷಣ ಟ್ರಸ್ಟ್‌ನ ಜ್ಞಾನ ವಿಕಾಸ ಪಾಲಿಟೆಕ್ನಿಕ್ ಕಾಲೇಜಿನ ಸಿಬ್ಬಂದಿ, ಶ್ರೀ ಸದ್ಗುರು ಕಬೀರಾನಂದಸ್ವಾಮಿ ನರ್ಸಿಂಗ್ ಕಾಲೇಜು, ಪ್ರಥಮ ದರ್ಜೆ ಕಾಲೇಜು ಬಿ.ಇಡಿ. ಪಿಯು ಕಾಲೇಜು ಆಂಗ್ಲ ಶಾಲೆಯ ವಿದ್ಯಾರ್ಥಿಗಳು ಉತ್ಸವದಲ್ಲಿ ಪಾಲ್ಗೊಂಡಿದ್ದರು. ಶ್ರೀ ಕಬೀರಾನಂದ ಸ್ವಾಮಿ ಆಂಗ್ಲ ಮತ್ತು ಮಾಧ್ಯಮ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳು ದೇಶದ ವಿವಿಧ ರಾಜ್ಯದ ಉಡುಗೆಯನ್ನು ತೊಡುವುದರ ಮೂಲಕ ಭಾವೈಕ್ಯತೆಯನ್ನು ಮೆರೆದಿದ್ದಾರೆ, ಇದೇ ರೀತಿ ಮ್ತತೊಂದು ಶಾಲೆಯ ಮಕ್ಕಳು ರಾಜ್ಯದ ವಿವಿಧ ಜಿಲ್ಲೆಯ ಸಾಂಸ್ಕೃತಿಕ ಉಡುಗೆಯನ್ನು ಧರಿಸುವುದರ ಮೂಲಕ ಮೆರವಣಿಗೆಯಲ್ಲಿ ಭಾಗವಹಿಸಿದ್ದರು.

ಉತ್ಸವವೂ ನಗರದ ಕಬೀರಾನಂದಾಶ್ರಮದಿಂದ ಪ್ರಾರಂಭವಾಗಿ ದೊಡ್ಡಪೇಟೆ, ಮೈಸೂರ್ ಕಫೆ, ಉಚ್ಚಂಗಿ ಯಲ್ಲಮ್ಮ ದೇವಾಲಯ ಚಿಕ್ಕಪೇಟೆ, ಆನೆಬಾಗಿಲು, ಸಂತೇಪೇಟೆ, ಬಿ.ಡಿ.ರಸ್ತೆ, ಎಸ್,ಬಿ.ಎಂ.ವೃತ್ತ, ಕೋಮಲ ನರ್ಸಿಂಗ್ ಹೋಂ, ಧರ್ಮಶಾಲಾರಸ್ತೆ, ಪಾರ್ಶ್ವನಾಥ್ ಸ್ಕೂಲ್ ಮುಂಬಾಗ, ಇ.ಪಿ.ಬ್ರದರ್ಸ್, ಶಾರದ ಬ್ರಾಸ್ ಬ್ಯಾಂಡ್ ಮನೆ ಮುಂಭಾಗ, ರಂಗಯ್ಯನ ಬಾಗಿಲು, ಉಜ್ಜಯಿನಿ ಮಠ, ಕರುವಿನಕಟ್ಟೆ ವೃತ್ತಯಿಂದ ಶ್ರೀಮಠವನ್ನು ತಲುಪಿತು.

ದಾರಿಯುದ್ದಕ್ಕೂ ಶ್ರೀಗಳ ಭಕ್ತಾಧಿಗಳು ಸ್ವಾಮಿಗಳ ದರ್ಶನವನ್ನು ಪಡೆಯುವ ಸಲುವಾಗಿ ಸಾಲುಗಟ್ಟಿ ನಿಂತಿದ್ದು, ಶ್ರೀಗಳಿಗೆ ಫಲ ಮತ್ತು ಹಾರ ಹಾಗೂ ಕಾಣಿಕೆಯನ್ನು ನೀಡುವುದರ ಮೂಲಕ ದರ್ಶನಾರ್ಶೀವಾದವನ್ನು ಪಡೆದರು.
















## ಪ್ರಮುಖ ಸುದ್ದಿ

# ಪ್ರಶಾಂತಿ ವಿದ್ಯಾಲಯದಲ್ಲಿ ಮಹಿಳಾ ದಿನಾಚರಣೆ





» **ಚಿತ್ರದುರ್ಗ**

ಓರ್ವ ಮಹಿಳೆ ಸುಶಿಕ್ಷಿತರಾಗಿದ್ದರೆ ಆಕೆ ಹುಟ್ಟಿದ ಮನೆ ಹಾಗು ಗಂಡನಮನೆಗಳೆರೆಡು ಬೆಳಕಾಗುತ್ತವೆ ಎಂದು ಸರ್ಕಾರಿ ನರ್ಸಿಂಗ್ ಕಾಲೇಜಿನ ಪ್ರಾಂಶುಪಾಲರಾದ ಅನುಸೂಯಮ್ಮ ತಿಳಿಸಿದರು.

ಚಿತ್ರದುರ್ಗದ ಐಯುಡಿಪಿ ಬಡಾವಣೆಯ ಪ್ರಶಾಂತಿ ವಿದ್ಯಾಲಯದ ಆವರಣದಲ್ಲಿ ನಡೆದ ಮಹಿಳಾ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಹಿಂದೆ ಮಹಿಳೆಯು ಕೇವಲ ಮನೆಯಲ್ಲಿ ಕುಟುಂಬ ನಿರ್ವಹಣೆಗೆ ಮಾತ್ರ ಸೀಮಿತವಾಗಿದ್ದಳು.ಆದರೆ ಸಂವಿಧಾನದ ಎಲ್ಲರಿಗೂ ಕೊಟ್ಟ ಸದಾವಕಾಶದಿಂದ ಮಹಿಳೆಯು ಇಂದು ಎಲ್ಲಾ ಕ್ಷೇತ್ರದಲ್ಲು ತನ್ನದೇ ಆದ ಛಾಪು ಮೂಡಿಸಿದ್ದಾಳೆ. ಮಹಿಳೆಗೆ ಸಿಕ್ಕ ಅವಕಾಶದಿಂದ ಶಿಕ್ಷಣ,ಆರೋಗ್ಯ,ರಾಜಕೀಯ ಕ್ಷೇತ್ರದಲ್ಲು ತನ್ನ ಪವರ್ ತೋರಿಸಿದ್ದಾರೆ. ಪುರುಷರಿಗೆ ಸರಿಸಮಾನವಾಗಿ ಬೆಳೆದು ತಾನು ಮನಸು ಮಾಡಿದರೆ ಯಾವುದೇ ಕ್ಷೇತ್ರದಲ್ಲಾದರು ಎದೆಗುಂದದೇ ಸಾಧಿಸಬಲ್ಲ ಛಲವುಳ್ಳವಳು ಎಂಬುದನ್ನು ಸಾಭೀತುಮಾಡಿದ್ದಾಳೆ. ಇದಕ್ಕೆ ಕೈಗನ್ನಡಿ ಎಂಬಂತೆ ಭಾರತ ದೇಶದ ರಾಷ್ಟಪತಿಯಾಗಿರುವ ದ್ರೌಪದಿ ಮುರ್ಮು,ಪ್ರತಿಭಾ ಪಾಟೀಲ್ ಹಾಗುಕೇಂದ್ರಸಚಿವರಾದ ನಿರ್ಮಲ ಸೀತಾರಾಮನ್,ಶೋಭಾ ಕರಂದ್ಲಾಜೆಮತ್ತು ಕ್ರೀಡಾಪಟುಗಳಾದಸೈನಾನೆಹ್ವಾಲ್,ವೈಶಾಲಿ ಸೇರಿದಂತೆ ಅನೇಕ ಮಹನಿಯರು ನಮಗೆಲ್ಲಾ ಪ್ರೇರಣೆಯಾಗಿದ್ದಾರೆ. ಇವರಂತೆಯೇ ಪ್ರತಿಯೊಬ್ಬ ಮಹಿಳೆಸಹ ಅವರವರಿಗೆ ಆಸಕ್ತಿಇರುವ ಕ್ಷೇತ್ರಗಳಲ್ಲಿಶ್ರಮವಹಿಸಿ ಪ್ರಯತ್ನಿಸಿದರೆ ಸಾಧನೆಯತ್ತ ಮುನ್ನುಗ್ಗಬಹುದಾಗಿದೆ.ಈ ನಿಟ್ಟಿನಲ್ಲಿ ಪ್ರತಿಯೊಬ್ಬ ಮಹಿಳೆಯು ಮುನ್ನುಗ್ಗಬೇಕಿದೆ.ನಾವು ನಡೆಯುವ ಹಾದಿ ಇತರರಿಗೆ ಮಾದರಿ ಆಗಬೇಕಿದೆ ಎಂದರು.

ಮಹಿಳಾದಿನಾಚರಣೆ ಅಂಗವಾಗಿ ಐಯುಡಿಪಿ ಯೋಗ ಕೇಂದ್ರದ ಅಧ್ಯಕ್ಷರಾದ ರಾಮಣ್ಣ,ಕಾರ್ಯದರ್ಶಿ ಜಯ್ಯಣ್ಣ ಹಾಗು ಪ್ರಾಥಮಿಕ ಶಿಕ್ಷಕರಾದ ಮಹಲಿಂಗಪ್ಪನವರು ಈವಿಶೇಷಕಾರ್ಯಕ್ರಮವನ್ನುಆಯೋಜಿಸಿ ಯೋಗ ಕೇಂದ್ರದ ಮಹಿಳಾಮಣಿಗಳನ್ನು ಸನ್ಮಾನಿಸಿದ್ದು ಸಂತಸ ತಂದಿದೆ.

ಇದೇ ವೇಳೆ ಐಯುಡಿಪಿ ಬಡಾವಣೆಯ ಪತಾಂಜಲಿ ಯೋಗಕೇಂದ್ರದ ಹವ್ಯಾಸಿಯೋಗಪಟುಗಳಾದ ಹ ಸುಮಕ್ಕ,ಗೀತ,ಪುಷ್ಪ,ಪುಷ್ಪವತಿ,ಮಂಜುಳ,ಶಬರಿ, ಸಂಯುಕ್ತ,ಸ್ವರೂಪ ,ಗೀತಮ್ಮಹಾಗು ಮಂಜುಳಮ್ಮರವರನ್ನು ಸನ್ಮಾನಿಸಿಸಲಾಯಿತು. ಕಾರ್ಯಕ್ರಮವನ್ನು ಶಿಕ್ಷಕರಾದ ಮಹಲಿಂಗಪ್ಪ ನಿರೂಪಿಸಿದರು. ಶಬರಿ, ಮಂಜುಳ ಪ್ರಾರ್ಥಿಸಿದರು. ಯೋಗಕೇಂದ್ರದ ಅಧ್ಯಕ್ಷ ರಾಮಣ್ಣ ಸ್ವಾಗತಿಸಿದ್ದು, ಕಾರ್ಯದರ್ಶಿ ಜಯ್ಯಣ್ಣ ವಂದಿಸಿದರು.ಈ ವೇಳೆ ಹಿರಿಯ ಯೋಗಪಟುಗಳಾದ ಹನುಮಂತಪ್ಪ,ರವಿಶಂಕರ್ ಇದ್ದರು.


Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T